ಸಂಪುಟ 01 | ಸಂಚಿಕೆ 196 | ಶುಕ್ರವಾರ 12 ಜೂನ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ**

ಪ್ರತಿ ವರ್ಷ ಜೂನ್ 12 ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನವನ್ನು ಆಚರಿಸಲಾಗುತ್ತದೆ. ಬಾಲಕಾರ್ಮಿಕ ಪದ್ಧತಿಯನ್ನು ತಡೆಗಟ್ಟಲು ಜಾಗೃತಿ ಮೂಡಿಸುವುದು ಮತ್ತು ಮಕ್ಕಳ ಹಕ್ಕುಗಳನ್ನು ರಕ್ಷಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಈ ಅಭಿಯಾನವನ್ನು ಅಂತರರಾಷ್ಟ್ರೀಯ ಕಾರ್ಮಿಕ ಸಂಸ್ಥೆ (ILO) 2002ರಲ್ಲಿ ಮೊದಲ ಬಾರಿಗೆ ಪ್ರಾರಂಭಿಸಿತು.

**2) ರಾಷ್ಟ್ರೀಯ ಕೆಂಪು ಗುಲಾಬಿ ದಿನ**

ರಾಷ್ಟ್ರೀಯ ಕೆಂಪು ಗುಲಾಬಿ ದಿನವನ್ನು (National Red Rose Day) ಪ್ರತಿ ವರ್ಷ ಜೂನ್ 12 ರಂದು ಪ್ರಪಂಚದಾದ್ಯಂತ, ವಿಶೇಷವಾಗಿ ಯುನೈಟೆಡ್ ಸ್ಟೇಟ್ಸ್‌ನಲ್ಲಿ ಆಚರಿಸಲಾಗುತ್ತದೆ. ಈ ದಿನವು ಪ್ರೀತಿ, ಸೌಂದರ್ಯ ಮತ್ತು ಪ್ರಣಯದ ಸಂಕೇತವಾಗಿರುವ ಕೆಂಪು ಗುಲಾಬಿಗೆ ಮೀಸಲಾದ ವಿಶೇಷ ದಿನವಾಗಿದೆ.

## ಸುಭಾಷಿತ

ನಿಮ್ಮ ಮೇಲೆ ನೀವು ಅವಲಂಬಿಸಿ ಹಾಗೂ ಧೈರ್ಯ ನಿಮ್ಮೊಳಗೇ ಹುಟ್ಟಬೇಕೆಂಬುದನ್ನು ತಿಳಿದಿರಿ. ಅದು ಸಮಯ ತೆಗೆದುಕೊಳ್ಳುತ್ತದೆ ಆದರೆ ನೀವು ಅದಕ್ಕಾಗಿ ಕೆಲಸ ಮಾಡಲೇ ಬೇಕು.


ಸುಧಾ ಮೂರ್ತಿ

# ಅನರ್ಹರನ್ನು ಕೈಬಿಡಲು ಗ್ಯಾರಂಟಿ ಯೋಜನೆಗಳ ಸಮಗ್ರ ಪರಿಷ್ಕರಣೆಗೆ ಮುಂದಾದ ಸರ್ಕಾರ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರಾಜ್ಯ ಸರ್ಕಾರವು ತನ್ನ ಮಹತ್ವಾಕಾಂಕ್ಷೆಯ ಐದು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಪಾರದರ್ಶಕತೆ ಮತ್ತು ಅರ್ಹ ಫಲಾನುಭವಿಗಳಿಗೆ ಮಾತ್ರ ಸೌಲಭ್ಯ ಸಿಗುವಂತೆ ಮಾಡಲು, ಫಲಾನುಭವಿಗಳ ಪಟ್ಟಿಯನ್ನು ಸಮಗ್ರವಾಗಿ ಪರಿಷ್ಕರಿಸಲು ಸರ್ಕಾರ ನಿರ್ಧರಿಸಿದೆ.**

ಈ ಸಂಬಂಧ ಅಧಿಕಾರಿಗಳಿಗೆ ತಳಮಟ್ಟದವರೆಗೆ ಪರಿಶೀಲನೆ ನಡೆಸಲು ಮತ್ತು 15 ದಿನಗಳ ಒಳಗಾಗಿ ವಿಸ್ತೃತ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲು ಸೂಚಿಸಿದೆ. ಅಗತ್ಯವಿದ್ದಲ್ಲಿ ಫಲಾನುಭವಿಗಳು ತಮ ದಾಖಲೆಗಳನ್ನು ಮತ್ತೆ ಸಲ್ಲಿಸಬೇಕಾದ ಪರಿಸ್ಥಿತಿ ಎದುರಾಗಬಹುದು ಎಂದು ಸರ್ಕಾರದ ಮೂಲಗಳು ತಿಳಿಸಿವೆ. ಅನರ್ಹರು ಯೋಜನೆಯ ಲಾಭ ಪಡೆಯುತ್ತಿರುವುದನ್ನು ತಡೆಯಲು ಮತ್ತು ಸರ್ಕಾರಿ ಬೊಕ್ಕಸದ ಮೇಲಿನ ಅನಗತ್ಯ ಹೊರೆ ಕಡಿಮೆ ಮಾಡಲು ಫಲಾನುಭವಿಗಳ ಪಟ್ಟಿಯನ್ನು ಪರಿಷ್ಕರಿಸಲಾಗುತ್ತಿದೆ. ಮೃತಪಟ್ಟವರ ಹೆಸರು, ಆದಾಯ ತೆರಿಗೆ ಪಾವತಿಸುವವರು ಮತ್ತು ಒಂದೇ ಮನೆಯಲ್ಲಿ ಒಂದಕ್ಕಿಂತ ಹೆಚ್ಚು ಜನ ಅನಗತ್ಯವಾಗಿ




ಸೌಲಭ್ಯ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಇಂತಹ ದೋಷಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಗೃಹ ಲಕ್ಷ್ಮಿ ಯೋಜನೆಯಲ್ಲಿ ಫಲಾನುಭವಿಗಳ ನಿಧನವಾದ ನಂತರವೂ ಹಣ ಪಾವತಿಯಾಗುತ್ತಿರುವ ನಿದರ್ಶನಗಳು ಬೆಳಕಿಗೆ ಬಂದಿವೆ. ಸುಮಾರು 100 ಕೋಟಿ ರೂಪಾಯಿಗೂ ಹೆಚ್ಚು ಹಣ ಅನರ್ಹರಿಗೆ ಪೋಲಾಗುತ್ತಿರುವ ಅಂದಾಜಿದೆ. ಯೋಜನೆಗಳ ಉದ್ದೇಶವು ನಿಜವಾದ ಬಡವರಿಗೆ ಮತ್ತು ಅರ್ಹರಿಗೆ ತಲುಪುವುದನ್ನು ಖಚಿತಪಡಿಸಿಕೊಳ್ಳುವುದು ಸರ್ಕಾರದ ಗುರಿಯಾಗಿದೆ.

ಅರ್ಹರಲ್ಲದವರು, ಸುಳ್ಳು ಮಾಹಿತಿ ನೀಡಿ ಅಥವಾ ದಾಖಲೆಗಳನ್ನು ತಿದ್ದುವ ಮೂಲಕ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳನ್ನು ಪಡೆಯುತ್ತಿರುವ ಪ್ರಕರಣಗಳು ಬೆಳಕಿಗೆ ಬಂದಿವೆ. ಗೃಹಲಕ್ಷ್ಮಿ ಮತ್ತು ಅನ್ನಭಾಗ್ಯ ಯೋಜನೆಯಡಿ ಹಲವು ಕಡೆಗಳಲ್ಲಿ ನಕಲಿ ಅಥವಾ ಅನರ್ಹ ಫಲಾನುಭವಿಗಳು ಸೇರ್ಪಡೆಯಾಗಿರುವುದು ಆಡಳಿತಕ್ಕೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ. ರಾಜ್ಯದ ಆರ್ಥಿಕ ಪರಿಸ್ಥಿತಿಯ ಮೇಲೆ ಈ ಯೋಜನೆಗಳು ಭಾರೀ ಹೊರೆಯಾಗುತ್ತಿವೆ. ಯೋಜನೆಗಳಿಗೆ ಮೀಸಲಿಡುವ ಬೃಹತ್ ಮೊತ್ತವು ಮೂಲಸೌಕರ್ಯ ಅಭಿವೃದ್ಧಿ ಮತ್ತು ಇತರ ಬಂಡವಾಳ ಹೂಡಿಕೆಯ ಮೇಲೆ ಪ್ರಭಾವ ಬೀರುತ್ತಿದೆ ಎಂಬ ಆತಂಕ ತಜ್ಞರಿಂದ ವ್ಯಕ್ತವಾಗುತ್ತಿದೆ.

ಈ ಎಲ್ಲ ಸವಾಲುಗಳನ್ನು ಗಮನದಲ್ಲಿಟ್ಟುಕೊಂಡು, ಯೋಜನೆಗಳನ್ನು ಸಮರ್ಪಕವಾಗಿ ತಲುಪಿಸಲು ಸರ್ಕಾರವು ಗಂಭೀರ ಪರಿಷ್ಕರಣೆಗೆ ಮುಂದಾಗಿದೆ. ಪಂಚ ಗ್ಯಾರಂಟಿ ಯೋಜನೆಗಳು ಜನಪರವಾಗಿದ್ದರೂ, ಅವುಗಳ ಅನುಷ್ಠಾನದಲ್ಲಿ ಪಾರದರ್ಶಕತೆ ಅತ್ಯಗತ್ಯ. ಸರ್ಕಾರದ ಈ ಪರಿಷ್ಕರಣಾ ನಿರ್ಧಾರವು ಯೋಜನೆಗಳನ್ನು ಮತ್ತಷ್ಟು ಬಲಪಡಿಸುವ ಮತ್ತು ಅರ್ಹ ಫಲಾನುಭವಿಗಳಿಗೆ ನ್ಯಾಯಯುತವಾಗಿ ಸಿಗುವಂತೆ ಮಾಡುವ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಲಿದೆ.

ರಾಜ್ಯ ಸರ್ಕಾರವು ಅಧಿಕಾರಕ್ಕೆ ಬಂದ ನಂತರ ರಾಜ್ಯದ ಜನತೆಯ ಆರ್ಥಿಕ ಭದ್ರತೆ ಮತ್ತು ಕಲ್ಯಾಣಕ್ಕಾಗಿ ಜಾರಿಗೆ ತಂದ ಪಂಚ ಗ್ಯಾರಂಟಿ ಯೋಜನೆಗಳು (ಶಕ್ತಿ, ಗೃಹಜ್ಯೋತಿ, ಗೃಹಲಕ್ಷ್ಮಿ, ಅನ್ನಭಾಗ್ಯ ಮತ್ತು ಯುವನಿಧಿ) ರಾಜ್ಯದ ರಾಜಕೀಯ ಮತ್ತು ಆರ್ಥಿಕ ವಲಯದಲ್ಲಿ ದೊಡ್ಡ ಸಂಚಲನ ಮೂಡಿಸಿವೆ. ಆದರೆ, ಇತ್ತೀಚಿನ ದಿನಗಳಲ್ಲಿ ಈ ಯೋಜನೆಗಳ ಅನುಷ್ಠಾನದಲ್ಲಿ ಕಂಡುಬರುತ್ತಿರುವ 4ನೇ ಪುಟಕ್ಕೆ

## ಶಿಕ್ಷಕರ ಸಂಘದ ನೂತನ ಪ್ರಧಾನ ಕಾರ್ಯದರ್ಶಿಯಾಗಿ ಹೆಚ್.ಜಡೆಪ್ಪ ಅವಿರೋದ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕಂಪ್ಲಿ ತಾಲೂಕು ಘಟಕದ ನೂತನ ಪ್ರಧಾನ ಕಾರ್ಯದರ್ಶಿಯಾಗಿ ಹೆಚ್.ಜಡೆಪ್ಪ ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.**

ನಂತರ ನೂತನ ಪ್ರಧಾನ ಕಾರ್ಯದರ್ಶಿ ಹೆಚ್.ಜಡೆಪ್ಪ ಮಾತನಾಡಿ, ಇತ್ತೀಚೆಗೆ ನಡೆದ ಪ್ರಾಥಮಿಕ ಶಾಲಾ ಶಿಕ್ಷಕರ ಚುನಾವಣೆಯಲ್ಲಿ ಸದಸ್ಯ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆ ಮಾಡಿದ ನಂತರ ನೂತನ ಪದಾಧಿಕಾರಿಗಳ ಸ್ಥಾನದಲ್ಲಿ ಪ್ರಧಾನ ಕಾರ್ಯದರ್ಶಿಯನ್ನಾಗಿ ನಮ್ಮನ್ನು ಆಯ್ಕೆ ಮಾಡಿರುವುದು ಖುಷಿ ತಂದಿದೆ. ಇದರಿಂದ ಮತ್ತಷ್ಟು ಜವಾಬ್ದಾರಿ ಹೆಚ್ಚಾಗಿದ್ದು, ಶಿಕ್ಷಕರ ಸಹಕಾರದೊಂದಿಗೆ ಪ್ರೀತಿ, ವಿಶ್ವಾಸದ ಮೂಲಕ ಸಂಘದ ಅಭಿವೃದ್ಧಿ ಜೊತೆಗೆ ಶಿಕ್ಷಕರ ಬೇಡಿಕೆಗಳಿಗೆ ಸಕಾಲದಲ್ಲಿ ಸ್ಪಂದಿಸಿ ಈಡೇರಿಸುವ ನಿಟ್ಟಿನಲ್ಲಿ ಶ್ರಮಿಸಲಾಗುವುದು ಎಂದರು. ನೂತನ ತಾಲೂಕು ಅಧ್ಯಕ್ಷ ಹನುಮಂತಪ್ಪ, ಖಜಾಂಚಿ ಐ.ಗಂಗಮ್ಮ ಹಾಗೂ ಸಹ ಶಿಕ್ಷಕ ವೃಂದದವರು ಸನ್ಮಾನಿಸಿ ಗೌರವಿಸುವ ಮೂಲಕ ಅಭಿನಂದಿಸಿದರು.

# ಸಚಿವ ಸ್ಥಾನ ಸಿಗುವ ಸಂಪೂರ್ಣ ಭರವಸೆ:ಶಾಸಕ ನಾಡಗೌಡ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಹಿರಿತನದ ಆಧಾರದಲ್ಲಿ ಮೊದಲ ಹಂತದ ಸಚಿವ ಸಂಪುಟದಲ್ಲಿಯೇ ನನಗೆ ಸಚಿವ ಸ್ಥಾನ ಸಿಗಬೇಕಾಗಿತ್ತು ಆದರೆ ಎರಡನೇ ಹಂತದ ವಿಸ್ತರಣೆಯಲ್ಲಿ ಸಚಿವ ಸ್ಥಾನ ಸಿಕ್ಕೇ ಸಿಗುತ್ತದೆ ಎಂಬ ಸಂಪೂರ್ಣ ಭರವಸೆ ನನಗಿದೆ ಎಂದು ಕೆ ಎಸ್ ಡಿ ಎಲ್ ಅಧ್ಯಕ್ಷ ಹಾಗೂ ಮುದ್ದೇಬಿಹಾಳ ಮತಕ್ಷೇತ್ರ ಶಾಸಕ ಅಪ್ಪಾಜಿ ನಾಡಗೌಡ ಹೇಳಿದರು.**

ಗುರುವಾರ ತಾಳಿಕೋಟಿ ಪಟ್ಟಣದಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಆಗಮಿಸಿದ ಸಂದರ್ಭದಲ್ಲಿ ಅವರು ಸ್ಥಳೀಯ



ಪ್ರವಾಸಿ ಮಂದಿರದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದರು. ಉತ್ತರ ಕರ್ನಾಟಕ ಭಾಗದಲ್ಲಿ ಎಚ್ ಕೆ ಪಾಟೀಲರನ್ನು ಹೊರತುಪಡಿಸಿದರೆ ನಾನೇ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ. ಇದರ ಜೊತೆಗೆ ಪ್ರಬಲ ಲಿಂಗಾಯತ ಸಮಾಜಕ್ಕೆ ಸೇರಿದವನಾಗಿದ್ದೇನೆ. ಆರು ಬಾರಿ ಶಾಸಕನಾಗಿ ಸೇವೆ ಸಲ್ಲಿಸಿದ ಅನುಭವ ನನಗಿದೆ.

ಸಿದ್ದರಾಮಯ್ಯ ಅವರಿಂದ ಹಿಡಿದು ವರಿಷ್ಠರ ವರೆಗೆ ಎಲ್ಲರೂ ನನಗೆ ಸಚಿವ ಸ್ಥಾನ ನೀಡುವುದಾಗಿ ಭರವಸೆ ನೀಡುತ್ತಲೇ ಬಂದಿದ್ದಾರೆ ನಾನು ಪಕ್ಷ ನಿಷ್ಠೆಯಿಂದ ಎಲ್ಲವನ್ನು ಸಹಿಸುತ್ತಲೇ ಬಂದಿದ್ದೇನೆ ಈಗ ಮತ್ತೆ ಆ ಸಹನೆಯನ್ನು ಪರೀಕ್ಷಿಸುವುದು ಬೇಡ ಎಂದು ವರಿಷ್ಠರಿಗೆ ಹೇಳಲು ಬಯಸುತ್ತೇನೆ ಎಂದರು. ನಾನು ಸಚಿವ ಸ್ಥಾನ ಕೇಳುತ್ತಿರುವುದು ನನಗಾಗಿ ಅಥವಾ ನನ್ನ ಸ್ವಾರ್ಥಕ್ಕಾಗಿ ಅಲ್ಲ ಕ್ಷೇತ್ರ ಹಾಗೂ ರಾಜ್ಯದ ಜನತೆಯ ಸೇವೆಯನ್ನು ಮಾಡಲಿಕ್ಕಾಗಿ. ನಾನೆಂದೂ ಅಧಿಕಾರವನ್ನು ಬಯಸಿದವನಲ್ಲ ಎಂದ ಅವರು ಈ ಬಾರಿ 2ನೇ ಹಂತದ ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನ ಪಡೆಯಲು ಎಲ್ಲ ರೀತಿಯ ಪ್ರಯತ್ನಗಳನ್ನು ನಾನು ಮಾಡಿದ್ದೇನೆ ಎಂದರು. ಈ ಸಮಯದಲ್ಲಿ ಪಕ್ಷದ ಮುಖಂಡರಾದ ಸಿದ್ದನಗೌಡ ಪಾಟೀಲ್ ನಾವದಗಿ, ಪ್ರಭುಗೌಡ ಮದರಕಲ್ಲ, ಶರಣುಧಣಿ ದೇಶಮುಖ, ಇಬ್ರಾಹಿಂ ಮನ್ಸೂರ್, ಸಂಗನಗೌಡ ಅಸ್ಕಿ ಮತ್ತಿತರರು ಇದ್ದರು.

## "ಕರೆಗುಡ್ಡ ಗ್ರಾಮಕ್ಕೆ ಬಸ್ಸಿನ ಸೌಲಭ್ಯ ಕಲ್ಪಿಸಿದ ಸಾರಿಗೆ ಇಲಾಖೆ"

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಘಟಕದಲ್ಲಿ ಸಾರಿಗೆ ಘಟಕದ ವ್ಯವಸ್ಥಾಪಕರು ದಲಿತ ವಿದ್ಯಾರ್ಥಿ ಪರಿಷತ್ ತಾಲೂಕು ಘಟಕದ ಅಧ್ಯಕ್ಷರಾದ ಬಂಡೆಗುರು ಇತ್ತೀಚಿಗೆ ಬಸ್ ಅನುಕೂಲ ಕಲ್ಪಿಸುವಂತೆ ಮನವಿ ಸಲ್ಲಿಸಿದ್ದರು. ಈ ಕುರಿತು ಸಂಜೆ ವರದಿ ಪತ್ರಿಕೆಯಲ್ಲಿ "ಕರೆಗುಡ್ಡ ಗ್ರಾಮಕ್ಕೆ ಸಮರ್ಪಕವಾಗಿ ಬಸ್ಸಗಳ ಸಂಚಾರಕ್ಕೆ ಮನವಿ" ತಲೆ ಬರಹದಡಿ ವರದಿ ಪ್ರಕಟವಾಗಿತ್ತು. ಈ ವರದಿಗೆ ಇಂದು ಫಲ ಸಿಕ್ಕಿದೆ.**

ಶೈಕ್ಷಣಿಕ ವರ್ಷ ಪ್ರಾರಂಭ ಆಗಿರುವುದರಿಂದ ತಾಲೂಕಿನ ವಿವಿಧ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಗ್ರಾಮಗಳಿಂದ ಪಟ್ಟಣಕ್ಕೆ ವಿದ್ಯಾಭ್ಯಾಸಕ್ಕಾಗಿ



ಶಾಲಾ ಕಾಲೇಜುಗಳಿಗೆ ಆಗಮಿಸುವುದರಿಂದ ಮಾನ್ವಿ ಸಾರಿಗೆ ಘಟಕದಿಂದ ಬೆಳಿಗ್ಗೆ ಹಾಗೂ ಸಂಜೆ ಶಾಲಾ ಅವಧಿಗೆ ಪೂರಕವಾಗಿ ಬಸ್ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ಘಟಕ ವ್ಯವಸ್ಥಾಪಕರು ತಿಳಿಸಿ ಅದರ ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದರು. ಇದಕ್ಕಾಗಿ ಗ್ರಾಮಸ್ಥರು ಸಾರಿಗೆ ಇಲಾಖೆಗೆ ಧನ್ಯವಾದ ತಿಳಿಸಿದ್ದಾರೆ.

## ಹುಣಿಸಿಹಾಳ ಹುಡಾ ಸರಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ವನಸಿರಿ ಫೌಂಡೇಷನ್ ನಿಂದ ವಿಶ್ವ ಪರಿಸರ ದಿನಾಚರಣೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ತಾಲೂಕಿನ ಹುಣಿಸಿಹಾಳ ಹುಡಾ ಸರಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ವನಸಿರಿ ಫೌಂಡೇಷನ್ ವತಿಯಿಂದ ವಿಶ್ವಪರಿಸರ ದಿನಾಚರಣೆ ಹಮ್ಮಿಕೊಳ್ಳುವ ಮೂಲಕ 50 ಸಸಿಗಳನ್ನು ನೆಡಲಾಯಿತು.**

ಶಾಲೆಯ ಮುಖ್ಯ ಶಿಕ್ಷಕಿ ಸೌಭಾಗ್ಯವತಿ ಮಾತನಾಡಿ ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ ಪರಿಸರವನ್ನು ನಾವು ಕಾಪಾಡಿದರೆ ಪರಿಸರ ನಮ್ಮನ್ನ ಕಾಪಾಡುತ್ತದೆ. ವನಸಿರಿ ಫೌಂಡೇಷನ್ ತಂಡದವರು ನಮ್ಮ ಶಾಲೆಯಲ್ಲಿ 50 ಸಸಿಗಳನ್ನು ನೆಡಲು ಮುಂದಾಗಿದ್ದಾರೆ ಇದು ಒಂದು ಒಳ್ಳೆಯ ಕಾರ್ಯ.ಮಕ್ಕಳಲ್ಲಿ ಸಸಿ ನೆಡುವ ಮೂಲಕ ಪರಿಸರ ಜಾಗೃತಿ ಮೂಡಿಸುತ್ತಿರುವುದು ಶ್ಲಾಘನೀಯ.ನಮ್ಮ ಶಾಲೆಯ ವತಿಯಿಂದ



ವಿದ್ಯಾರ್ಥಿಗಳ ಮೂಲಕ ಈ ಸಸಿಗಳನ್ನು ಉಳುಸಿ ಬೆಳಸಲು ಮುಂದಾಗುತ್ತೇವೆ ಎಂದು ನಾವು ಅವರಿಗೆ ತಿಳಿಸಲು ಇಚ್ಚೆಸುತ್ತೇವೆ. ಸಸಿಗಳನ್ನು ನೀಡಿದರು ವನಸಿರಿ ಫೌಂಡೇಷನ್ ತಂಡಕ್ಕೆ ಧನ್ಯವಾದಗಳು ಇದೇ ರೀತಿ ಇನ್ನೂ ಹೆಚ್ಚು ಹೆಚ್ಚು ಪರಿಸರ ಜಾಗೃತಿ ಕಾರ್ಯಗಳನ್ನು ಮಾಡುವಂತಾಗಲಿ ಎಂದು ಆಶಿಸುತ್ತೇನೆ.

ಈ ಸಂಧರ್ಭದಲ್ಲಿ ವನಸಿರಿ ಫೌಂಡೇಷನ್ ರಾಜ್ಯ ಸಮಾಜಿಕ ಜಾಲತಾಣ ಅಧ್ಯಕ್ಷ ಚನ್ನಪ್ಪ ಕೆ. ಹೊಸಹಳ್ಳಿ,ಮಸ್ಕಿ ತಾಲೂಕ ಅಧ್ಯಕ್ಷ ರಾಜು ಪತ್ತಾರ ಬಳಗಾನೂರ ಪರಿಸರ ಪ್ರೇಮಿ ಶ್ರೀಧರ ವಿಶ್ವಕರ್ಮ,ಮುಖ್ಯ ಶಿಕ್ಷಕಿ ಶ್ರೀಮತಿ ಸಂಗೀತಾ,ಶಿಕ್ಷಕ ವರ್ಗದವರಾದ ಪ್ರದೀಪ್ ಕುಮಾರ, ಶ್ರೀಮತಿ ಪಾರ್ವತಿ,ಶ್ರೀಮತಿ ಸುರೇಖಾ, ಶ್ರೀಮತಿ ಚಂದ್ರಕಲಾ,ಕು.ರಾಖಿಭಾಯಿ, ತ್ರಿವೇಣಿ, ಶ್ರೀಮತಿ ರೇಣುಕಾ, ಅನಿತಾ,ಶೃತಿ,ರೇಣುಕಾ ಹಾಗೂ ವಿದ್ಯಾರ್ಥಿಗಳು ಇದ್ದರು.

# ಮತಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಬದ್ಧ: ಶಾಸಕ ನಾಡಗೌಡ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಮುದ್ದೇಬಿಹಾಳ ಮತಕ್ಷೇತ್ರವನ್ನು ಒಂದು ಮಾದರಿ ಕ್ಷೇತ್ರವನ್ನಾಗಿ ಮಾಡುವ ಉದ್ದೇಶವನ್ನು ಇಟ್ಟುಕೊಂಡು ಕಳೆದ ಮೂರು ವರ್ಷಗಳಲ್ಲಿ ಸಾಕಷ್ಟು ಅನುದಾನವನ್ನು ತಂದು ಕೆಲಸ ಮಾಡಿದ್ದೇನೆ ನಾನು ಎಲ್ಲದರಲ್ಲೂ ರಾಜಕಾರಣ ಮಾಡುವ ಸ್ವಭಾವದ ವ್ಯಕ್ತಿ ಅಲ್ಲ ಎಂದು ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ,ಶಾಸಕ ಅಪ್ಪಾಜಿ ನಾಡಗೌಡರು ಹೇಳಿದರು.**

ಗುರುವಾರ ಪಟ್ಟಣದ ಎಪಿಎಂಸಿ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ರೂ. 5 ಕೋಟಿ ಮೊತ್ತದ ಸಿಸಿ ರಸ್ತೆ, ಚರಂಡಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ನಂತರ ಅಡತ್ ಅಸೋಸಿಯೇಷನ್ ಸಭಾ ಭವನದಲ್ಲಿ ಹಮ್ಮಿಕೊಂಡ ಅಭಿನಂದನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೆಲವರು ಎಲ್ಲದರಲ್ಲೂ ರಾಜಕಾರಣ ಮಾಡುವ ಹವ್ಯಾಸವನಿಟ್ಟುಕೊಂಡು ನನ್ನ




ಅಭಿವೃದ್ಧಿ ಕಾರ್ಯಗಳನ್ನು ಸಹಿಸದೆ ವಿರೋಧಿಸುವ ಕೆಲಸವನ್ನು ಮಾಡುತ್ತಿದ್ದಾರೆ ಅವರು ಎಷ್ಟೇ ಪ್ರಯತ್ನಿಸಿದರೂ ಅಭಿವೃದ್ಧಿ ಕಾರ್ಯಗಳನ್ನು ನಿಲ್ಲಿಸಲು ಸಾಧ್ಯವಿಲ್ಲ. ತಾಳಿಕೋಟಿ ಪಟ್ಟಣದ ಅಭಿವೃದ್ಧಿಗಾಗಿ ಶಕ್ತಿಮೀರಿ ಶ್ರಮಿಸುತ್ತಿದ್ದೇನೆ, ಈಗಾಗಲೇ ಹಲವಾರು ಕಾಮಗಾರಿಗಳು ಪ್ರಗತಿ ಹಂತದಲ್ಲಿವೆ.

ನೂತನ ತಾಲೂಕು ಆದ ನಂತರ ಇದಕ್ಕೆ ಅಗತ್ಯವಾದ ಕಚೇರಿಗಳನ್ನು ಆರಂಭಿಸಲು ಹಂತ ಹಂತವಾಗಿ ಪ್ರಯತ್ನಿಸುತ್ತಿದ್ದೇನೆ, ಎಲ್ಲದಕ್ಕೂ ಆರ್ಥಿಕ ಅನುಮೋದನೆ ಪಡೆದು ಕೆಲಸ ಮಾಡಬೇಕು ಇಲ್ಲದೆ ಹೋದಲ್ಲಿ ಯೋಜನೆಗಳು ಕಾಗದದ ವಸ್ತುಗಳಾಗುತ್ತವೆ ಜಾರಿಯಲ್ಲಿ ಬರುವುದಿಲ್ಲ ಎಂದ ಅವರು ಮೂರು ವರ್ಷಗಳ ಅವಧಿಯಲ್ಲಿ ತಾಳಿಕೋಟಿ ಮುದ್ದೇಬಿಹಾಳ ಹಾಗೂ ನಾಲ್ತವಾಡ ಎಪಿಎಂಸಿಗೆ ಒಟ್ಟು 19.13 ಕೋಟಿ ಅನುದಾನ ಕೊಟ್ಟಿದ್ದೇನೆ. ಇನ್ನೂ ಎರಡು ವರ್ಷಗಳ ಅವಧಿ ಇದ್ದು ಸಾಕಷ್ಟು ಕೆಲಸ ಮಾಡಲು ಅವಕಾಶವಿದೆ. ಅಭಿವೃದ್ಧಿ ಕಾರ್ಯಗಳಲ್ಲಿ ನನ್ನೊಂದಿಗೆ ಕೈಜೋಡಿಸಿ. ನೀವು ತೋರುತ್ತಿರುವ ಒಗ್ಗಟ್ಟು ಅಭಿವೃದ್ಧಿಯ ಕಾರ್ಯಗಳಿಗಾಗಿರಲಿ ಹೊರತು ಕೆಟ್ಟ ರಾಜಕಾರಣ ಮಾಡಲಿಕ್ಕಾಗಿ ಅಲ್ಲ ಅದರಿಂದ ಏನೂ ಸಾಧಿಸಲು ಸಾಧ್ಯವಿಲ್ಲ ಎಂದರು. ಬೆಳಗಾವಿ ವಿಭಾಗೀಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ವಿಜಯಕುಮಾರ್ ಹಾಗೂ ಪ್ರಭುಗೌಡ ಮದರ್ಕಲ್ ಮಾತನಾಡಿದರು.

ಇದೇ ಸಂದರ್ಭದಲ್ಲಿ ಶಾಸಕ ಅಪ್ಪಾಜಿ ನಾಡಗೌಡರಿಗೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು, ಈ ಸಮಯದಲ್ಲಿ ಮುಸ್ಲಿಂ ಧಾರ್ಮಿಕ ಮುಖಂಡ ಸೈಯದ್ ಶಕೀಲ ಅಹ್ಮದ್ ಖಾಜಿ, ಮಹದೇವಪ್ಪ ಕುಂಬಾರ, ಪುರಸಭೆ ಮಾಜಿ ಸದಸ್ಯರಾದ ಪಿ.ಬಿ.ಮದರಕಲ್ಲ, ಅಕ್ಕಮಹಾದೇವಿ ಕಟ್ಟಿಮನಿ, ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಸಿದ್ದನಗೌಡ ಪಾಟೀಲ ನಾವದಗಿ, ಸಹಕಾರಿ ಬ್ಯಾಂಕ್ ನಿರ್ದೇಶಕ ಎಂ. ಎಸ್.ಸರಶೆಟ್ಟಿ, ಎಂ.ಜಿ.ಪಾಟೀಲ,ಸಿ.ಎಸ್.ಮಾಳಿ, ಚಿಂತಪ್ಪ ಯಾಳಗಿ,ಸುರೇಶಧಣಿ ನಾಡಗೌಡ ಬಿಂಜಲಭಾವಿ, ಶರಣುಧಣಿ ದೇಶಮುಖ, ಸಂಗನಗೌಡ ಅಸ್ಕಿ, ಬಸವರಾಜ ಕುಂಬಾರ, ಇಬ್ರಾಹಿಂ ಮನ್ಸೂರ್, ಶಿವಾನಂದ ಹೂಗಾರ, ಮೋದಿನ ನಗಾರ್ಚಿ,ಫಯಾಜ ಉತ್ನಾಳ, ಸಿಕಂದರ್ ಡೋಣಿ, ಕೃ.ಉ.ಮಾ.ಸ.ಬೆಳಗಾವಿ ವಿಭಾಗೀಯ ಎಇಇ ವಿಜಯಕುಮಾರ, ಸಹಾಯಕ ಅಭಿಯಂತರ ಲಮಾಣಿ, ತಾಳಿಕೋಟಿ ಎಪಿಎಂಸಿ ಕಾರ್ಯದರ್ಶಿ ಆರ್ ಎಸ್ ರಾಠೋಡ, ಅಡತ್ ಅಸೋಸಿಯೇಷನ್ ಸದಸ್ಯರು, ವರ್ತಕರು ಹಾಗೂ ಎಪಿಎಂಸಿ ಕಾರ್ಯಾಲಯದ ಸಿಬ್ಬಂದಿಗಳು ಮತ್ತಿತರರು ಇದ್ದರು.

## ಸಾಹಿತ್ಯ ಸಿಂಚನ

ಜೀವನವೆಂಬ ಪಯಣದ ಹಾದಿ,
ಸುಖ–ದುಃಖಗಳ ಸಂಗಮವೇ ನದಿ.
ನಗುವಿನ ಕ್ಷಣಗಳ ನೆನಪುಗಳು,
ಮನದಾಳದಲ್ಲಿ ಮೂಡುವ ಕನಸುಗಳು.

ಸೋಲು ಬಂದರೂ ಕುಗ್ಗದಿರು,
ಗೆಲುವಿನ ದಾರಿಯಲಿ ಮುಂದುವರಿಯು.
ಧೈರ್ಯವೇ ಬದುಕಿನ ನಿಜ ಬಲ,
ಅದರಿಂದಲೇ ಅರಳುವುದು ಯಶಸ್ಸಿನ ಫಲ.

ಪ್ರೀತಿ, ಸ್ನೇಹ, ದಯೆಯ ಬೆಳಕು,
ಮಾನವತೆಯೇ ಜೀವನದ ಚೆಲುವು.
ಒಳ್ಳೆಯ ಕಾರ್ಯದ ಹೆಜ್ಜೆ ಇಡು,
ಲೋಕದಲ್ಲಿ ನಿನ್ನ ಗುರುತು ಬಿಡು.

ಕಾಲವು ಸಾಗುತಿರುತ್ತದೆ ನಿರಂತರ,
ಪ್ರತಿ ಕ್ಷಣವೂ ಅಮೂಲ್ಯ ಅಪಾರ.
ಸಾರ್ಥಕ ಬದುಕಿನ ಕನಸು ಹೊತ್ತು,
ಹೊಸ ಬೆಳಕಿನತ್ತ ಸಾಗೋಣ ಮುನ್ನುಗ್ಗುತ್ತಾ.

ಅಮರೇಶ್

## ಗೋಮರ್ಸಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಅಭಿವೃದ್ಧಿಗೆ ಮನವಿ.

**ನೈಜ್ಯ ದೆಸೆ ನ್ಯೂಸ್**

ಸಿಂಧನೂರು ತಾಲೂಕಿನ ಮಾಡಸಿರವಾರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ,ಗೋಮರ್ಸಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಅಭಿವೃದ್ಧಿ ಕಾಮಗಾರಿಗಳ ಅಗತ್ಯತೆಯನ್ನು ಮನಗಂಡು, ಗ್ರಾಮದ ಮುಖಂಡರು, ಶಾಲಾ ಶಿಕ್ಷಕರು ಃಚಿರಂಣ ಸಾರ್ವಜನಿಕರು ಇಂದು ಮಾಡಸಿರವಾರ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳಿಗÉ (PDO) ಗೋಮರ್ಸಿಯಲ್ಲಿ ಮನವಿ ಪತ್ರ ಸಲ್ಲಿಸಿದರು.

ಶಾಲೆಯಲ್ಲಿ ಹೆಚ್ಚುವರಿ ಕೊಠಡಿಗಳ ನಿರ್ಮಾಣ, ಶೌಚಾಲಯಗಳ ದುರಸ್ತಿ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಶಾಲಾ ಆವರಣದ ಸ್ವಚ್ಛತೆ, ಆಟದ ಮೈದಾನದ ಅಭಿವೃದ್ಧಿ, ಕಾಂಪೌಂಡ್ ನಿರ್ಮಾಣ ಸೇ–ರಿದಂತೆ ವಿದ್ಯಾರ್ಥಿಗಳಿಗೆ ಅಗತ್ಯವಿರುವ






ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರುಪಾದಿ ಕೆ ಗೋಮರ್ಸಿ, ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಅಗತ್ಯ ಮೂಲಸೌಕರ್ಯಗಳು ಲಭ್ಯವಾಗುವುದು ಅತ್ಯಂತ ಮುಖ್ಯವಾಗಿದ್ದು, ಗೋಮರ್ಸಿ ಶಾಲೆಯ ಅಭಿವೃದ್ಧಿಗೆ ಗ್ರಾಮ ಪಂಚಾಯಿತಿ ಹಾಗೂ ಸಂಬಂಧಿಸಿದ ಇಲಾಖೆಗಳು ವಿಶೇಷ ಗಮನ ಹರಿಸಬೇಕೆಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಗ್ರಾಮ ಪಂಚಾಯಿತಿ ಅಧಿಕಾರಿಗಳು ಶಾಲೆಯ ಸಮಸ್ಯೆಗಳನ್ನು ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಶಾಲಾ ಶಿಕ್ಷಕರು,ಗ್ರಾಮಸ್ಥರಾದ ಅಪ್ಪಯ್ಯ ,ಸಂಶುದ್ದೀನ್, ಉಮೇಶ್ ಉಪ್ಪಾರ, ವಿರುಪಣ್ಣ, ಅಜ್ಮೀರ್ ಸಾಬ್,ನಾಗಪ್ಪ,ವೀರೇಶ್ ಸೇರಿದಂತೆ ಅನೇಕ ಸಾರ್ವಜನಿಕರು ಉಪಸ್ಥಿತರಿದ್ದರು.

## ಗ್ರಾಮಸ್ಥರು ಮತ್ತು ಅಡುಗೆ ಸಹಾಯಕಿ ಕುಟುಂಬದ ನಡುವೆ ವೈಯಕ್ತಿಕ ದ್ವೇಷ, ಮಕ್ಕಳನ್ನು ಶಾಲೆಗೆ ಕಳಿಸದ ಪಾಲಕರು



**ನೈಜ್ಯ ದೆಸೆ ನ್ಯೂಸ್**

ಮಸ್ಕಿ ತಾಲ್ಲೂಕ ಹಾಲಾಪೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಮ್ ರಾಮಲದಿನ್ನಿ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಶೈಕ್ಷಣಿಕ ವರ್ಷ ಆರಂಭವಾಗಿ ಹನ್ನೆರಡು ದಿನಕಳೆದರೂ ಶಾಲೆಗೆ ಮಕ್ಕಳನ್ನು ಪಾಲಕರು ಕಳಿಸುತ್ತಿಲ್ಲ,ಒ–ಟ್ಟು ವಿದ್ಯಾರ್ಥಿಗಳ ಸಂಖ್ಯೆ 17 ಇದ್ದು,


ಕಾರಣ ಶಾಲೆಯಲ್ಲಿ ಬಿಸಿಯುಟ ಮಾಡುವ ಶಂಕ್ರಮ್ಮ ಎನ್ನುವ ಅಡುಗೆ ಸಹಾಯಕಿಯನ್ನು ಶಾಲೆಯಿಂದ ಬಿಡಸಬೇಕು. ಏಕೆಂದರೆ ಗ್ರಾಮಸ್ಥರು ಮತ್ತು ಅಡುಗೆ ಸಹಾಯಕಿ ಶಂಕ್ರಮ್ಮ ಕುಟುಂಬದ ಮದ್ಯೆ ಕೆಲ ದಿನಗಳ ಹಿಂದೆ ವೈಯಕ್ತಿಕ ಜಗಳ ಕಾರಣದಿಂದಾಗಿ ಭಿನ್ನಾಭಿಪ್ರಾಯ ಉಂಟಾಗಿದ್ದು, ಏನಾದರೂ ನಮ್ಮ ಮಕ್ಕಳ ಮೇಲೆ ಅನಾಹುತ ಆದರೆ ಯಾರು ಹೊಣೆ ಎಂಬುದು ಪಾಲಕರ ವಾದ, ಶಾಲೆ ಆರಂಭವಾಗಿ ಇಷ್ಟು ದಿನಗಳಾದರೂ ಮಕ್ಕಳನ್ನು ಪಾಲಕರು ಕಳಿಸಿಲ್ಲ,ಮುಂದೆ ಕೂಡ ಕಳಸಲ್ಲ ಎಂದು ಪಾಲಕರು ಗಟ್ಟಿ ನಿರ್ಧಾರ.

ಗಂಡ ಹೆಂಡತಿ ಜಗಳದಲ್ಲಿ ಕೂಸು ಬಡವಾಯಿತು ರಾಮ ರಾಮ ಎಂಬಂತೆ ಇದೆ ರಾಮಲದಿನ್ನಿ ಶಾಲೆ ಕಥೆ,ಎನು ಅರಿಯದ ಹಸುಗೂಸು ಕಂದಮಗಳು ಶಾಲೆಬಿಟ್ಟು ಊರಲ್ಲೆ ಅಲ್ಲಿ ಇಲ್ಲಿ ಆಟ ಆಡುತ್ತಾ ಶಾಲೆಯಿಂದ ದೂರ ಉಳಿದಿದ್ದು.ಇಂದು ಶಾಲೆಗೆ ಮಾನ್ವಿ ಬಿಇಒ ಅವರ ಆದೇಶದಂತೆ ಸಮಸ್ಯೆ ಬಗೆಹರಿಸಲು ಪ್ರೌಢಶಾಲಾ ಮುಖ್ಯಗುರು ಸುಭಾಷ್ ಸಿಂಗ್ ಆಗಮಿಸಿ ಪಾಲಕರ ಸಭೆ ಮಾಡಿದರು, ಆದ–'ರೆ ಶಾಲಾ ಭೂಧಾನಿ ಅಯ್ಯಪ್ಪ,ಪಾಲಕರಾದ ಸಣ್ಣಯಂಕಪ್ಪ, ಮುದಕಪ್ಪ,ಅಂಬಣ್ಣ,ಭೀಮೆಶ, ಸಿದ್ದಪ್ಪ,ಅಮರೇಶ ಇನ್ನಿತರರು ಸೇರಿ ಒಪ್ಪಲಿಲ್ಲ , ಹೀಗಾಗಿ ಸಮಸ್ಯೆಗೆ ಪರಿಹಾರ ಯಾವಗ,ಮಕ್ಕಳ ಮುಂದಿನ ಭವಿಷ್ಯ ಹೇಗೆ,ಸರಕಾರದ ಲಕ್ಷ ಲಕ್ಷರೂಪಯಿ ಕಟ್ಟಡ,ಸೌಲಭ್ಯಗಳು ಯಾ–ರಿಗಾಗಿ, ಯಾವ ಪುರುಷರಾರ್ಥಕ್ಕೆ,ಈಗಲಾದರು ಶಿಕ್ಷಣ ಇಲಾಖೆಯ ಉನ್ನತಮಟ್ಟದ ಅಧಿಕಾ–ರಿಗಳು, ಸ್ಥಳೀಯ ಜನಪ್ರತಿನಿದಿಗಳು ಸೇರಿ ಮಕ್ಕಳೆಂದರೆ ಅರಳುವ ಗುಲಾಬಿ ಇದ್ದಂತೆ,ಅವುಗಳನ್ನು ಬೆಳಸುತ್ತಾರೊ ಅಥ–'ವಾ ಬಿಳಿಸುತ್ತಾರೋ ಎಂಬುದೆ ಪ್ರಶ್ನೆ....

## ಸಿಂಧನೂರು ನಗರದ ವಿವಿಧ ಕಚೇರಿಗಳಿಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ದಿಢೀರ್ ಭೇಟಿ ಪರಿಶೀಲನೆ

**ನೈಜ್ಯ ದೆಸೆ ನ್ಯೂಸ್**

ರಾಯಚೂರು ಜೂನ್ 11 (ಕರ್ನಾಟಕ ವಾರ್ತೆ): ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಬುಧವಾರ ಬೆಳಿಗ್ಗೆ ಜಿಲ್ಲೆಯ ಸಿಂಧನೂರು ನಗರದ ವಿವಿಧ ಕಚೇರಿಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ಮಾಡಿದರು. ಮೊದಲು ಸಿಂಧನೂರಿನ ನಗರಸಭೆಗೆ ಆಗಮಿಸಿ, ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು ನಗರಸಭೆಯ ವ್ಯಾಪ್ತಿಯಲ್ಲಿ ಸರಿಯಾಗಿ ಕಾಲಕಾಲಕ್ಕೆ ತೆರಿಗೆ ಸಂಗ್ರಹಿಸಬೇಕು.











ನಗರದ ಜನರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಮುಂಗಾರು ಮಳೆ ಹೆಚ್ಚಿನ ಪ್ರಮಾಣದಲ್ಲಿ ಬರುವ ಸಾಧ್ಯತೆ ಇದೆ. ಆದ್ದರಿಂದ ಕುಡಿಯುವ ನೀರನ್ನು ಆಗಾಗ ಪರೀಕ್ಷೆ ಮಾಡಿ, ಶುದ್ಧ ಕುಡಿಯುವ ನೀರು ಪೂರೈಕೆಗೆ ಗಮನ ಹರಿಸಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗ ಹರಡದಂತೆ ಮುಂಜಾಗ್ರತೆವಹಿಸಬೇಕು. ಮಳೆ ನೀರು ಸರಾಗವಾಗಿ ಹ–ರಿಯುವಂತಾಗಲು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕಾಲುವೆ, ಚರಂಡಿಗಳನ್ನು ಸ್ವಚ್ಛಗೊಳಿಸುವ ಕಾರ್ಯ ಆಗಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ನಂತರ ಸಿಂಧನೂರು ನಗರದ ವಿವಿಧ ರಸಗೊಬ್ಬರ ಹಾಗೂ ಕೀಟ ನಾಶಕ ಅಂಗಡಿಗಳಿಗೆ ಭೇಟಿ ನೀಡಿ, ದಾಸ್ತಾನು ಪುಸಕ್ತ, ರಶೀದಿ ಪುಸ್ತಕಗಳನ್ನು ಪರಿಶೀಲಿಸಿದರು. ಅಲ್ಲದೇ ಗ್ರಾಹಕರಿಗೆ ಯಾವ ದರದಲ್ಲಿ ಇವುಗಳನ್ನು ಮಾರಾಟ ಮಡಲಾಗುತ್ತಿದೆ. ದರ ಪಟ್ಟಿಯನ್ನು ಹಾಕಲಾಗಿದೆಯೇ ಎಂಬ ಬಗ್ಗೆ ಮಾಹಿತಿ ಪಡೆದರು. ರೈತರಿಗೆ ಅನುಕೂಲವಾಗುಂತೆ ರಸ ಗೊಬ್ಬರ ದಾಸ್ತಾನು ಮಾಡಬೇಕೆಂದು ಅಂಗಡಿಯ ಮಾಲೀಕರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು. ನಂತರ ಬಸ್ ನಿಲ್ದಾಣದ ಹತ್ತಿರವಿರುವ ಇಂದಿರಾ ಕ್ಯಾಂಟೀನ್ ಗೆ ಭೇಟಿ ನೀಡಿ, ಸಾರ್ವಜನಿಕರಿಗೆ ಕಡಿಮೆ ದರದಲ್ಲಿ ಊಟ, ತಿಂಡಿ ಪೂರೈಸುವ ಉದ್ದೇಶದಿಂದ ಸರ್ಕಾರ ಇಂದಿರಾ ಕ್ಯಾಂಟೀನ್‌ಗಳನ್ನು ಆರಂಭಿಸಿದೆ. ಕಡಿಮೆ ವೆಚ್ಚದ ಆಹಾರಗಳನ್ನು ಪೂರೈಕೆ ಮಾಡುವ ಜೊತೆಗೆ ಕ್ಯಾಟೀನ್‌ನಲ್ಲಿ ಸ್ವಚ್ಛತೆ ಮತ್ತು ಗ್ರಾಹಕರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ನಂತರ ಸಿಂಧನೂರಿನ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ದಿಢೀರ್ ಭೇಟಿ ನೀಡಿ, ಆಸ್ಪತ್ರೆಯ ಮೂಲಸೌಕರ್ಯ ಹಾಗೂ ಕುಂದು ಕೊರತೆಗಳ ಬಗ್ಗೆ ಪರಿಶೀಲಿಸಿದರು. ಸಿಬ್ಬಂದಿಯ ಹಾಜರಾತಿ ಪುಸ್ತಕ, ಕಚೇರಿ ಖರ್ಚು ವೆಚ್ಚದ ಕಡತಗಳನ್ನು ಪರಿಶೀಲಿಸಿ, ಸಮಯಕ್ಕೆ ಸರಿಯಾಗಿ ಕೆಲಸಕ್ಕೆ ಹಾಜರಿರಬೇಕು ಎಂದು ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿಗಳಿಗೆ ಸೂಚನೆ ನೀಡಿದರು. ನಂತರ ವಾರ್ಡ್ಗಳಿಗೆ ತೆರಳಿ ರೋಗಿಗಳ ಆರೋಗ್ಯ ವಿಚಾರಿಸಿದರು. ಔಷಧ ಉಗ್ರಾಣ ಪರಿಶೀಲಿಸಿ, ಔಷಧಗಳನ್ನು ರೋಗಿಗಳಿಗೆ ಸಮರ್ಪಕವಾಗಿ ವಿತರಣೆ ಮಾಡುವಂತೆ ಸೂಚಿಸಿದರು.

## ದೇವದುರ್ಗ ತಾಲೂಕಿನ ಅತಂತ್ರ ಸ್ಥಿತಿಯಲ್ಲಿ ಮಂಡಲಗುಡ್ಡ ಸರ್ಕಾರಿ ಪ್ರಾಥಮಿಕ ಶಾಲೆ

**ನೈಜ್ಯ ದೆಸೆ ನ್ಯೂಸ್**

ಮಂಡಲಗುಡ್ಡ: ದೇವದುರ್ಗ ತಾಲೂಕು ಅಮರಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಂಡಲಗುಡ್ಡ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆ ಕಟ್ಟಡಗಳ ಕೊರತೆಯಿಂದ ಗಂಭೀರ ಸಂಕಷ್ಟಕ್ಕೆ ಸಿಲುಕಿದೆ. ಶಿಥಿಲಗೊಂಡಿದ್ದ ಸುಮಾರು 30?35 ವರ್ಷಗಳ ಹಳೆಯ ಶಾಲಾ ಕಟ್ಟಡಗಳನ್ನು ವಿದ್ಯಾರ್ಥಿಗಳ ಸುರಕ್ಷತೆ ದೃಷ್ಟಿಯಿಂದ ಲೋಕೋಪಯೋಗಿ ಇಲಾಖೆ ತೆರವುಗೊಳಿಸಿದ ಬಳಿಕ, ಶಾಲೆಯಲ್ಲಿ ಕೇವಲ ಎರಡು ಕೊಠಡಿಗಳು ಮಾತ್ರ ಉಳಿದಿವೆ.

ಪ್ರಸ್ತುತ 1ರಿಂದ 7ನೇ ತರಗತಿವರೆಗೆ ಒಟ್ಟು 158 ವಿದ್ಯಾರ್ಥಿಗಳು ಇದೇ ಎರಡು ಕೊಠಡಿಗಳಲ್ಲಿ ಪಾಠ ಕಲಿಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಸ್ಥಳಾವಕಾಶದ

> ಅಧಿಕಾರಿಗಳ ಪ್ರತಿಕ್ರಿಯೆ "ಮಂಡಲಗುಡ್ಡ ಶಾಲೆಯ ಸಮಸ್ಯೆಯ ಕುರಿತು ನನಗೆ ಇನ್ನೂ ಸಂಪೂರ್ಣ ಮಾಹಿತಿ ಇಲ್ಲ. ನಾನು ಇತ್ತೀಚೆಗೆ ಬಂದಿದ್ದು, ಈ ಬಗ್ಗೆ ಮಾಹಿತಿ ಪಡೆದು ಅಗತ್ಯ ಕ್ರಮ ಕೈಗೊಳ್ಳುತ್ತೇನೆ."
> – ರಾಧಾ ದೇವಿ, ಕ್ಷೇತ್ರ ಶಿಕ್ಷಣಾಧಿಕಾರಿ, ದೇವದುರ್ಗ

ಕೊರತೆಯಿಂದ ಹಲವಾರು ವಿದ್ಯಾರ್ಥಿಗಳು ಬಯಲಿನಲ್ಲಿ ಕುಳಿತು ಪಾಠ ಕೇಳುತ್ತಿದ್ದಾರೆ.

ಈ ಕುರಿತು ಗ್ರಾಮಸ್ಥರು, ಎಸ್‌ಡಿ–ಎಂಸಿ ಸದಸ್ಯರು ಹಾಗೂ ಶಿಕ್ಷಣಾಭಿಮಾನಿಗಳು ಹಲವು ಬಾರಿ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳ ಗಮನಕ್ಕೆ ತಂದಿದ್ದರೂ ಶಾಶ್ವತ ಪರಿಹಾರ ದೊರೆತಿಲ್ಲ ಎಂದು ಆರೋಪಿಸಿದ್ದಾರೆ. ಶಾಲಾ ಶಿಕ್ಷಕರು ಕೂಡ




ಮೇಲಧಿಕಾರಿಗಳಿಗೆ ಹಲವು ಬಾರಿ ಪತ್ರ ಬರೆದು ಸಮಸ್ಯೆ ಪರಿಹಾರಕ್ಕೆ ಮನವಿ ಮಾಡಿದ್ದಾರೆ. ಗ್ರಾಮಸ್ಥರು ಹಾಗೂ ಪೋಷಕರು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ತಕ್ಷಣವೇ ಹೆಚ್ಚುವರಿ ಕೊಠಡಿಗಳ ನಿರ್ಮಾಣ ಹಾಗೂ ಮೂಲಸೌಕರ್ಯ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

# ಸ್ಪರ್ಧಾತ್ಮಕ ಪರೀಕ್ಷಾ ಪುಸ್ತಕ ಉಚಿತ ವಿತರಣೆ

## ಸ್ಪರ್ಧಾತ್ಮಕ ಸಮುದ್ರದಲ್ಲಿ ಈಜಿ ಗೆದ್ದು ಬನ್ನಿ: ಭೀಮರಾಯ್ ಬಿ. ರಾಮಸಮುದ್ರ

**ನೈಜ್ಯ ದೆಸೆ ನ್ಯೂಸ್**

**ಮಾನ್ವಿ: ನಗರದ ಉಚಿತ 24/7 ಗ್ರಂಥಾಲಯದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ನಡೆಸುತ್ತಿರುವ ವಿದ್ಯಾರ್ಥಿಗಳಿಗೆ ತಾಲೂಕು ದಂಡಾಧಿಕಾರಿ ಹಾಗೂ ಗ್ರಂಥಾಲಯದ ಸಂಸ್ಥಾಪಕ ಭೀಮರಾಯ್ ಬಿ. ರಾಮಸಮುದ್ರ ಅವರು ತಮ್ಮ ತಂಡದೊಂದಿಗೆ ರಚಿಸಿರುವ "ಜೇಡರ ಬಲೆ" ಎಂಬ 25 ಸಾವಿರ ಪ್ರಶ್ನೋತ್ತರಗಳನ್ನು ಒಳಗೊಂಡ ಸಾಮಾನ್ಯ ಜ್ಞಾನ ಪುಸ್ತಕವನ್ನು ಉಚಿತವಾಗಿ ವಿತರಿಸಿದರು.**

ಬಳಿಕ ವಿದ್ಯಾರ್ಥಿಗಳಿಗೆ ದಿಕ್ಸೂಚಿ ಭಾಷಣ ಮಾಡಿದ ಭೀಮರಾಯ್ ಬಿ. ರಾಮಸಮುದ್ರ ಅವರು, "ನಾನು ವಿದ್ಯಾರ್ಥಿಯಾಗಿದ್ದಾಗ ಅನುಭವಿಸಿದ ಕಷ್ಟಗಳನ್ನು ಇಂದಿನ ವಿದ್ಯಾರ್ಥಿಗಳು ಅನುಭವಿಸಬಾರದು ಎಂಬ ಉದ್ದೇಶದಿಂದ ನನ್ನಿಂದಾಗುವ ಅಳಿಲು ಸೇವೆಯನ್ನು ಮಾಡುತ್ತಿದ್ದೇನೆ.



ಇಂದಿನ ಸ್ಪರ್ಧಾತ್ಮಕ ಜಗತ್ತು ಒಂದು ಸಮುದ್ರದಂತಿದ್ದು, ಅದರಲ್ಲಿ ಯಶಸ್ಸಿನ ದಡ ತಲುಪಬೇಕಾದರೆ ನಿರಂತರ ಅಧ್ಯಯನ ಮತ್ತು ಉತ್ತಮ ಪುಸ್ತಕಗಳ ಸಹಕಾರ ಅಗತ್ಯವಾಗಿದೆ. ಯುವಕರು ತಮ್ಮ ಸಮಯವನ್ನು ವ್ಯರ್ಥ ಮಾಡದೇ, ಮೊಬೈಲ್ ಅಡಿಕ್ಷನ್ ಎಂಬ ಪಿಡುಗಿನಿಂದ ದೂರವಿದ್ದು, ಸ್ಪಷ್ಟ ಗುರಿಯೊಂದಿಗೆ ತಪಸ್ಸಿನಂತೆ ಓದಿದರೆ ಸರ್ಕಾರಿ ಹುದ್ದೆಗಳನ್ನು ಪಡೆಯಲು ಸಾಧ್ಯ. ನಮ್ಮ ಭಾಗಕ್ಕೆ ಅಂಟಿಕೊಂಡಿರುವ ಹಿಂದುಳಿದ ಹೈದರಾಬಾದ್–ಕರ್ನಾಟಕ ಪ್ರದೇಶದ ಹಣೆಪಟ್ಟಿಯನ್ನು ತೆಗೆದುಹಾಕುವ ಜವಾಬ್ದಾರಿ ಯುವಕರ ಮೇಲಿದೆ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸ್ಪರ್ಧಾರ್ಥಿಗಳು, "ಮಾನ್ವಿಗೆ ಬಂದಿರುವ ಅನೇಕ ಅಧಿಕಾರಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಹೆಚ್ಚಿನ ಗಮನ ಹರಿಸಿರಲಿಲ್ಲ. ಆದರೆ ಭೀಮರಾಯ್ ಸರ್ ಅವರು ವಿದ್ಯಾರ್ಥಿಗಳಿಗೆ ಸರ್ಕಾರಿ ಉದ್ಯೋಗ ಪಡೆಯಲು ಸೂಕ್ತ ವಾತಾವರಣ ನಿರ್ಮಿಸಿ, ಪುಸ್ತಕಗಳ ವಿತರಣೆ ಹಾಗೂ ನಿರಂತರ ಮಾರ್ಗದರ್ಶನದ ಮೂಲಕ ಪ್ರೋತ್ಸಾಹಿಸುತ್ತಿರುವುದು ನಮಗೆ ಹೊಸ ಉತ್ಸಾಹ ನೀಡಿದೆ. ಇಂತಹ ಅಧಿಕಾರಿಗಳು ದೊರೆತಿರುವುದು ನಮ್ಮ ಸೌಭಾಗ್ಯದ ಸಂಗತಿ" ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿದಾರ ಮಹಿಬೂಬ್ ಮದ್ಲಾಪುರ, ಖಾಸಗಿ ಉಪನ್ಯಾಸಕರ ಸಂಘದ ಅಧ್ಯಕ್ಷ ಆಂಜನೇಯ ನಸ್ಲಾಪುರ, ಶಿಕ್ಷಕರ ಸಂಘದ ಸಂಗಮೇಶ ಮುದೋಳ್, ಬಸವರಾಜ್, ಅಜೀಜ್, ಶ್ರೀಧರ್ ಸೇ–ರಿದಂತೆ ಅನೇಕ ಸ್ಪರ್ಧಾರ್ಥಿಗಳು ಉಪಸ್ಥಿತರಿದ್ದರು.

## ಸರ್ವಧರ್ಮಿಯರ ಭಾವೈಕ್ಯತಾ ಕೇಂದ್ರ ಬಳಗಾನೂರಿನ ಸೂಫಿ ಶರಣ ಹಜರತ್ ಸೈಯದ್ ಸುಲ್ತಾನ್ ಷಾಃ ಖಾದ್ರಿ ಅರಬ್ ರವರ ಉರುಸಿನಲ್ಲಿ ಜನಸಾಗರ!"

**ನೈಜ್ಯ ದೆಸೆ ನ್ಯೂಸ್**

**ಮಸ್ಕಿ: ತಾಲೂಕಿನ ಬಳಗಾನೂರು ಪಟ್ಟಣದ ಸೂಫಿ ಶರಣರಾದ ಮುಹಾಜೀರ್–ಏ–ಅರಬ್‌ಸ್ತಾನ್ ಹಜರತ್ ಸೈಯದ್ ಸುಲ್ತಾನ್ ಷಾಃ ಖಾದ್ರಿಯವರ ದರ್ಗಾದ ಉರುಸು ವಂಶಪಾರಂಪರ್ಯ ಮುತವಲ್ಲಿಗಳಾದ ಸೈಯ್ಯದ್ ಅಬ್ದುಲ್ ಖಾದರ ಭಾಷಾ ರವರ ನೇತೃತ್ವದಲ್ಲಿ ಬುದವಾರ ಅತ್ಯಂತ ವಿಜೃಂಭಣೆಯಿಂದ ಜರುಗಿತು.**

ಸಂಜೆ 6 ಗಂಟೆಗೆ ಮೌಲಾನ ಸೈಯದ್ ಷಾಃ ಮಹಮೂದ್ ಖಾದ್ರಿ ಸಾಹೇಬ್ ಸಜ್ಜಾದ ನಶೀನ್ ಅವರ ಮನೆಯಿಂದ ವಂಶಪಾರಂಪರ್ಯದ ಮುತವಲ್ಲಿ ಹಫೀಜ್ ಸೈಯದ್ ಅಬ್ದುಲ್ ಖಾದರ್‌ಬಾಷ ಖಾದ್ರಿ ಸಾಹೇಬ್ ಅವರ ನೇತೃತ್ವದಲ್ಲಿ ಗಂಧ ಕಾರ್ಯಕ್ರಮ ಭಕ್ತಿಭಾವದಿಂದ ಆರಂಭವಾಯಿತು. ಡೊಳ್ಳು, ನಗಾರಿ ಹಾಗೂ ಧಾರ್ಮಿಕ ಘೋಷಣೆಗಳ ನಡುವೆ ನಡೆದ ಗಂಧ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಭಕ್ತರಲ್ಲಿ ಆಧ್ಯಾತ್ಮಿಕ ಉತ್ಸಾಹ ತುಂಬಿತು.



ನಂತರ ಮುಹಾಜೀರ್–ಏ–ಅರಬ್‌ಸ್ತಾನ್ ಹಜರತ್ ಸೈಯದ್ ಸುಲ್ತಾನ್ ಷಾಃ ಖಾದ್ರಿಯವರ ಗದ್ದುಗೆಗೆ ಪೂಜೆ ಸಲ್ಲಿಸಿ, ಹೂವಿನ ಹಾರಗಳನ್ನು ಅರ್ಪಿಸುವ ಮೂಲಕ ನಾಮಸ್ಮರಣೆ ಮಾಡಲಾಯಿತು. ವಿವಿಧ ಭಾಗಗಳಿಂದ ಆಗಮಿಸಿದ್ದ ಸದ್ಭಕ್ತರು ದರ್ಗಾದಲ್ಲಿ ಪ್ರಾರ್ಥನೆ ಸಲ್ಲಿಸಿ ಆಶೀರ್ವಾದ ಪಡೆದರು.ಈ ಉರುಸಿನಲ್ಲಿ ಮುಖ್ಯ ಅತಿಥಿಗಳಾಗಿ ಹಜರತ್ ಸೈಯದ್ ಷಾ: ಮುಜತಬಾ ನಬೀರ ಖಾದ್ರಿ ಸಾಹೇಬ್ ಆನೆಹೊಸುರು, ಹಜರತ್ ಸೈಯದ್ ಷಾಃ ಪೀರ್ ಪಾಷ ಖಾದ್ರಿ ಸಾಹೇಬ್ ಹಾಗೂ ಹಜರತ್ ಸೈಯದ್ ಮಹೆಬೂಬ ಪೀರ್ ಖಾದ್ರಿ ಸಾಹೇಬ್ ಮುಕ್ಕುಂದಾ ಶರೀಫ್, ಹಜರತ್ ಸೈಯದ್ ನಯೂಮ್ ಖಾದ್ರಿ ಸಾಹೇಬ್ ಕನ್‌ಲ್‌ಪೀರಾ ಮುದಗಲ್, ಹಜರತ್ ಸೈಯದ್ ಷಾ: ರಫೀಕ್ ಖಾದ್ರಿ ಸಾಹೇಬ್ ಬಳ್ಳಾರಿ, ಹಜರತ್ ಮೌಲಾನ ಸೈಯದ್ ಷಾ ನುರುದ್ದಿನ್ ಖಾದ್ರಿ ಸಾಹೇಬ್ ಸಿಂಧನೂರು, ಹಜರತ್ ಸೈಯದ್ ಷಾಃ ಆರಿಫ್ ಪಾಷ ಖಾದ್ರಿ ಸಾಹೇಬ್ ಮಾನ್ವಿ ಸೇರಿದಂತೆ ಅನೇಕ ಧಾರ್ಮಿಕ ಮುಖಂಡರು ಭಾಗವಹಿಸಿದ್ದರು.

ಅದೇ ರೀತಿ ಹಜರತ್ ಸೈಯದ್ ಷಾ: ಅಬೀದ್ ಪಾಷ ಖಾದ್ರಿ ಸಾಹೇಬ್, ಹಜರತ್ ಸೈಯದ್ ಷಾ: ಜಿಲಾನಿ ಸಾಹೇಬ್ ಜಾಲ್‌ನವಿ, ಹಜರತ್ ಸೈಯದ್ ಷಾ: ಮಹೆಬೂಬ ಪಾಷ ಖಾದ್ರಿ ಖಾಜಿ, ಹಜರತ್ ಷಾ: ಮುಹ್ಮದ್ ಹುಸೇನ್ ಬಾಷ ಖಾದ್ರಿ ಹಾಗೂ ಹಜರತ್ ಷಾ: ಷಾಹುಸೇನ್ ಚಿತ್ತಿ ಉಲ್ ಖಾದ್ರಿ ಸೇರಿದಂತೆ ಹಲವು ಗಣ್ಯರು ಉರುಸಿಗೆ ಸಾಕ್ಷಿಯಾದರು.

ಕಾರ್ಯಕ್ರಮದಲ್ಲಿ ಮಾಜಿ ಮುತುವಲ್ಲಿಗಳಾದ ಜನಾಬ್ ಸೈಯದ್ ಷಕ್ಷಾವಲಿ ಸಾಹೇಬ್ ಖಾದ್ರಿ ಜಾಗಿರದಾರ್, ಜನಾಬ್ ಸೈಯದ್ ಮೋಧಿನ್ ಪಾಷ ಖಾದ್ರಿ ಜಾಗಿರದಾರ್, ಮೌಲ್ವಿ ಸೈಯದ್ ಹುಸೇನ್ ಬಾಷ ಖಾದ್ರಿ ಜಾಗಿರದಾರ್,ಮಾನ್ವಿ ಹಫೀಜ್ ಸೈಯದ್ ಖಾದರ್‌ಬಾಷ ಖಾದ್ರಿ ಜಾಗಿರದಾರ್ ಮುತವಲ್ಲಿ, ಸೇರಿದಂತೆ ಬಳಗಾನೂರು ಮತ್ತು ಸುತ್ತಲಿನ ಗ್ರಾಮದ ಅಪಾರ ಸಂಖ್ಯೆಯ ಸದ್ಭಕ್ತರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಭಕ್ತಿ, ಸರ್ವಧರ್ಮ ಸಾಮರಸ್ಯ ಹಾಗೂ ಸೂಫಿ ಪರಂಪರೆಯ ಸುವಾಸನೆ ಹರಡಿದ ಈ ಉರುಸು ಕಾರ್ಯಕ್ರಮ ಬಳಗಾನೂರಿನಲ್ಲಿ ಧಾರ್ಮಿಕ ಸಂಭ್ರಮಕ್ಕೆ ಸಾಕ್ಷಿಯಾಯಿತು.ಈ ಉರುಸಿಗೆ ಬಳಗಾನೂರು ಠಾಣೆಯ ಆರಕ್ಷಕರು ಸೂಕ್ತ ಬಂದೋಬಸ್ತನ್ನು ನೀಡುವ ಮೂಲಕ ಯಶಸ್ವಿಯಾಗಲು ಸಹಕರಿಸಿದರು.

## ನೇಮಕಾತಿ ಪ್ರಕಟಣೆ

**SJICR ನೇಮಕಾತಿ 2026 ? 40 ಸಹಾಯಕ ಪ್ರಾಧ್ಯಾಪಕ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಜೂನ್ 10, 2026**

SJICR ನೇಮಕಾತಿ 2026: 40 ಸಹಾಯಕ ಪ್ರಾಧ್ಯಾಪಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಶ್ರೀ ಜಯದೇವ ಹೃದಯರಕ್ತನಾಳ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ (ಬೆಂಗಳೂರು ಶಾಖೆ, ಕಲಬುರ್ಗಿ ಶಾಖೆ) ಜೂನ್ 2026 ರ SJICR ಅಧಿಕೃತ ಅಧಿಸೂಚನೆಯ ಮೂಲಕ ಸಹಾಯಕ ಪ್ರಾಧ್ಯಾಪಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರು, ಕಲಬುರಗಿ ? ಕರ್ನಾಟಕದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 25-ಜೂನ್-2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 09-06-2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25-ಜೂನ್-2026 ಅಧಿಕೃತ ವೆಬ್‌ಸೈಟ್: jayadevacardiology.com

## ಊರಿಗೆ ಹೋದಾಗ ನಿಮ್ಮಮನೆ ಮೇಲೆ ನಿಗಾ ಇಡಲು ನಮಗೆ ತಿಳಿಸಿ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ : ಜಿಲ್ಲೆಯ ಹಳ್ಳಿ ಮತ್ತು ನಗರ ಪ್ರದೇಶದಲ್ಲಿನ ಜನತೆ ನೀವು ಮನೆಯಲ್ಲಿ ಯಾರು ಇಲ್ಲದಂತೆ ಬೇರೆ ಊರಿಗೆ ತರಳು ವಾಗ. ನಿಮ್ಮ ಮನೆ ಮೇಲೆ ನಿಗಾ ಇಡಬೇಕೆಂದರೆ ನಮಗೆ ತಿಳಿಸಿ ಎಂದು ಜಿಲ್ಲಾ ಪೊಲೀಸ್ ಇಲಾಖೆ ಕೋರಿದೆ.



ಈ ಕುರಿತು ಎಸ್ಪಿ. ಡಾ. ಸುಮನ್ ಡಿ.ಪನ್ನೇಕರ್ ಈ ಕುರಿತು ಮಾಹಿತಿ ನೀಡುತ್ತ. ಮನೆಯಲ್ಲಿ ಯಾರು ಇಲ್ಲದೆ ಊರಿಗೆ ಹೋದಾಗ ಹೆಚ್ಚಾಗಿ ಕಳ್ಳತನ ನಡೆಯುತವೆ. ಅದನ್ನು ತಡೆಯುವ ನಿಟ್ಟಿನಲ್ಲಿ ಲಾಕ್ಸ್ ಹೌಸ್ ಮಾನಿಟರಿಂಗ್ ಸಿಸ್ಟಮ್ ಜಾರಿಗೆ ತಂದಿದೆ. ಯಾರಿಗೆ ತಮ್ಮ ಮನೆಯ ಮೇಲೆ ಪೊಲೀಸರು ನಿಗಾ ಇಡಬೇಕಾದ ಅಗತ್ಯತೆ ಇದ್ದರೆ. ನಿಮ್ಮಮನೆಯ ವಿಳಾಸ, ಲೊಕೇಷನ್, ಮೊಬೈಲ್ ನಂಬರ್ ನ್ನು ಇಲಾಖೆಯ 9480803083 ಗೆ ಕಳಿಸಿದರೆ. ಅದನ್ನು ಸಂಬಂಧಿಸಿದ ಪ್ರದೇಶದ ಠಾಣೆಗಳಿಗೆ ಕಳಿಸಿ ನಿಮಗಮ ಮನೆಯ ಮೇಲೆ ನಿಗಾ ಇಡಲಿದೆಂದು ಹೇಳಿದ್ದಾರೆ. ವರದಿ : ಜಿಲಾನಸಾಬ್ ಬಡಿಗೇರ್

### 1ನೇ ಪುಟದಿಂದ....

ಲೋಪದೋಷಗಳು ಮತ್ತು ಸರ್ಕಾರದ ಬೊಕ್ಕಸದ ಮೇಲಾಗುತ್ತಿರುವ ಆರ್ಥಿಕ ಒತ್ತಡವು ಸರ್ಕಾರದ ಗಂಭೀರ ಚಿಂತನೆಗೆ ಕಾರಣವಾಗಿದೆ. ಯೋಜನೆಗಳ ಘೋಷಣೆಯಾದ ಆರಂಭದಿಂದಲೂ ಹಲವು ವಿವಾದಗಳು ಕೇಳಿಬರುತ್ತಿವೆ. ತೆರಿಗೆ ಪಾವತಿದಾರರು, ಸರ್ಕಾರಿ ನೌಕರರು ಅಥವಾ ಸುಸ್ಥಿತಿಯಲ್ಲಿರುವ ಕುಟುಂಬಗಳನ್ನು ಯೋಜನೆಗಳ ವ್ಯಾಪ್ತಿಯಿಂದ ಹೊರಗಿಡಲು ಕಠಿಣ ಪರಿಶೀಲನೆ ನಡೆಸಲು ಸರ್ಕಾರ ನಿರ್ಧರಿಸಿದೆ.

**ಹೊಸದಾಗಿ ಅರ್ಜಿಗಳ ಆಹ್ವಾನ :** ಅಕ್ರಮಗಳನ್ನು ತಡೆಗಟ್ಟಲು ಮತ್ತು ಅರ್ಹರನ್ನು ಮಾತ್ರ ಗುರುತಿಸಲು, ಪ್ರಸ್ತುತ ಇರುವ ಫಲಾನುಭವಿಗಳ ಪಟ್ಟಿಯನ್ನು ಮರು ಪರಿಶೀಲಿಸಿ, ಅವಶ್ಯಕವಿದ್ದಲ್ಲಿ ಹೊಸದಾಗಿ ಅರ್ಜಿಗಳನ್ನು ಆಹ್ವಾನಿಸುವ ಕುರಿತು ಚಿಂತನೆ ನಡೆಸಲಾಗುತ್ತಿದೆ. ಆಧಾರ್ ದೃಢೀಕರಣ ಮತ್ತು ನೇರ ನಗದು ವರ್ಗಾವಣೆ ಪ್ರಕ್ರಿಯೆಯನ್ನು ಇನ್ನಷ್ಟು ಬಿಗಿಗೊಳಿಸುವ ಮೂಲಕ ಮಧ್ಯವರ್ತಿಗಳ ಹಾವಳಿ ಮತ್ತು ಸೋರಿಕೆಯನ್ನು ತಡೆಗಟ್ಟಲು ಸರ್ಕಾರ ಮುಂದಾಗಿದೆ.ಯೋಜನೆಗಳ ಪರಿಷ್ಕರಣೆಯಿಂದ ಸರ್ಕಾರವು ಎರಡು ಮುಖ್ಯ ಉದ್ದೇಶಗಳನ್ನು ಹೊಂದಿದೆ

**ಸಂಪನ್ಮೂಲಗಳ ಮರುಹಂಚಿಕೆ :** ನಿಜಕ್ಕೂ ಅಗತ್ಯವಿರುವ ಬಡ ಮತ್ತು ಕೆಳಮಧ್ಯಮ ವರ್ಗದ ಜನರಿಗೆ ಮಾತ್ರ ಸೌಲಭ್ಯಗಳು ತಲುಪುವಂತೆ ಮಾಡುವುದು. ಸರ್ಕಾರದ ಬೊಕ್ಕಸದ ಮೇಲಾಗುತ್ತಿರುವ ಅನಗತ್ಯ ಒತ್ತಡವನ್ನು ಕಡಿಮೆ ಮಾಡಿ, ರಾಜ್ಯದ ಆರ್ಥಿಕ ಸ್ಥಿರತೆಯನ್ನು ಕಾಪಾಡುವುದು.ವಿದ್ಯುತ್ ಸಂಪರ್ಕಗಳ ಬಳಕೆಯ ಮಾದರಿ (ಉದಾಹರಣೆಗೆ: ವಸತಿ ಉದ್ದೇಶದ ಬದಲು ವಾಣಿಜ್ಯ ಉದ್ದೇಶಕ್ಕೆ ಬಳಸುತ್ತಿರುವುದು), ಟೆನೆಂಟ್ (ಬಾಡಿಗೆದಾರರ) ಮಾಹಿತಿ, ಮತ್ತು ಆಧಾರ್ ಜೋಡಣೆಯಂತಹ ದಾಖಲೆಗಳನ್ನು ಮರುಪರಿಶೀಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

2026-27ನೇ ಸಾಲಿಗೆ ಈ ಐದು ಯೋಜನೆಗಳಿಗಾಗಿ ಸರ್ಕಾರವು ಸುಮಾರು 51,286 ಕೋಟಿ ಅನುದಾನವನ್ನು ಮೀಸಲಿಟ್ಟಿದ್ದು, ಈ ಹಣದ ಸರಿಯಾದ ಬಳಕೆಗೆ ಒತ್ತು ನೀಡಲಾಗುತ್ತಿದೆ. ಆರ್ಥಿಕ ಹೊರೆ 2026-27ರ ಬಜೆಟ್ ಅಂದಾಜಿನ ಪ್ರಕಾರ, ಈ ಐದು ಯೋಜನೆಗಳಿಗಾಗಿ ಸರ್ಕಾರ ಸುಮಾರು 51,286 ಕೋಟಿಗಳನ್ನು ವ್ಯಯಿಸುತ್ತಿದೆ. ಇದು ರಾಜ್ಯದ ಒಟ್ಟು ವೆಚ್ಚದ (ಸಾಲ ಮರುಪಾವತಿ ಹೊರತುಪಡಿಸಿ) ಸುಮಾರು ಶೇ.12ರಷ್ಟು ಭಾಗವಾಗಿದೆ.

**ಬಜೆಟ್ ಕೊರತೆ:** ಸಿಎಜಿ ವರದಿಯು ಈ ಯೋಜನೆಗಳ ಅನುಷ್ಠಾನವು ರಾಜಸ್ವ ವೆಚ್ಚ ಮತ್ತು ರಾಜಸ್ವ ಕೊರತೆಯನ್ನು ಹೆಚ್ಚಿಸಿದೆ ಎಂದು ಗಮನಿಸಿದೆ. ಇದು ಮೂಲಸೌಕರ್ಯ ಮತ್ತು ಅಭಿವೃದ್ಧಿ ಕಾಮಗಾರಿಗಳಿಗಾಗಿ ಮೀಸಲಿಡುವ ಬಂಡವಾಳ ವೆಚ್ಚದ ಮೇಲೆ ಪರಿಣಾಮ ಬೀರಬಹುದು ಎಂಬ ಆತಂಕವೂ ಇದೆ.

ನೈಜ್ಯ ದೆಸೆ ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## "ಹಂಪನಗೌಡ ಬಾದರ್ಲಿಗೆ ಮಂತ್ರಿ ಸ್ಥಾನಕ್ಕಾಗಿ ಪಾದಯಾತ್ರೆ ಮಾಡಿ ವಿಶೇಷ ಪೂಜೆ"

❑ ನೈಜ್ಯ ದೆಸೆ ನ್ಯೂಸ್

ಪೋತ್ನಾಳ್: ರಾಗಲಪರ್ವಿ ಜಿಲ್ಲಾ ಪಂಚಾಯತಿ ಕ್ಷೇತ್ರದ ಅಭಿಮಾನಿ ಬಳಗದಿಂದ ಹಾಗೂ ಕಾಂಗ್ರೆಸ್ ಕಾರ್ಯಕರ್ತರಿಂದ ರಾಗಲಪರ್ವಿ ಕ್ರಾಸಿನಿಂದ ಮಂಗಳವಾರ ಪಾದಯಾತ್ರೆ ಮೂಲಕ ಐದು ಕೀ.ಮೀ ದೂರದ ಪೊತ್ನಾಳ್ ಸೀಮೆ ವ್ಯಾಪ್ತಿಗೆ ಬರುವ ರಾಯಚೂರು ಸಿಂಧನೂರು ಮುಖ್ಯ ರಸ್ತೆಯಲ್ಲಿರುವ ಗಾಳಿ ದುರಗಮ್ಮ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು.




ಹಂಪನಗೌಡ ಬಾದರ್ಲಿಯವರು ಜಿಲ್ಲೆಯ ಹಿರಿಯ ಶಾಸಕರಾಗಿದ್ದು, ಶಿಕ್ಷಣ ಹಾಗೂ ನೀರಾವರಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಸಿಂಧನೂರು ತಾಲೂಕಿನ ಅಂಬಾಮಠದ ಅಂಬಾದೇವಿ ದೇವಸ್ಥಾನದ ಹೊಸ ಕಟ್ಟಡ ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದಿಂದ ವಿಶೇಷ ಅನುದಾನವನ್ನು ತರುವ ಮೂಲಕ ಶಕ್ತಿ ಪೀಠ ಅಂಬಾಮಠದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ.

ಇಂತಹವರಿಗೆ ಸಚಿವ ಸ್ಥಾನವನ್ನು ನೀಡಿದಲ್ಲಿ ತಾಲೂಕು ಸೇರಿದಂತೆ ಇಡೀ ರಾಯಚೂರು ಜಿಲ್ಲೆ ಅಭಿವೃದ್ಧಿಯಾಗುವುದರಲ್ಲಿ ಯಾವುದೇ ಸಂದೇಹ ಇಲ್ಲ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು. ಈಗಿನ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು ಹಾಗೂ ಕೆಪಿಸಿಸಿ ರಾಜ್ಯಾಧ್ಯಕ್ಷರಾದ ಬಿ.ಕೆ. ಹರಿಪ್ರಸಾದರವರು ಶಾಸಕ ಹಂಪನಗೌಡರಿಗೆ ಸಚಿವ ಸ್ಥಾನ ನೀಡಲು ಮನಸ್ಸು ಮಾಡಬೇಕೆಂದು ಅವರಲ್ಲಿ ಮನವಿ ಮಾಡುತ್ತೇವೆ ಎಂದರು. ಈಸಂದರ್ಭದಲ್ಲಿಹನುಮರೆಡ್ಡೆಪ್ಪಗೌಡ ರಾಮತ್ನಾಳ್, ದೊಡ್ಡಅಮರಯ್ಯ ವಲಕಮದಿನ್ನಿ, ನಾಗರಾಜ ರಾಮತ್ನಾಳ್, ರಾಮಣ್ಣ ಗೊನವಾರ, ಅರುಣಕುಮಾರ ನಾಯಕ ಯಾಪಲಪರ್ವಿ, ದುರಗಪ್ಪ ದಿದ್ದಿಗಿ, ಸಾಲುಮನ್ ವಕೀಲರು, ಸೂಗನಗೌಡ ಪೊಲೀಸ್ ಪಾಟೀಲ್ ಬನ್ನಿಗನೂರು, ಯಾಪಲಪರ್ವಿ ಗ್ರಾಮದ ಶರಣಪ್ಪ, ಚಂದ್ರಶೇಖರ, ನಾಗರೆಡ್ಡಿ, ಸಾಬಣ್ಣ, ಹಾಗೂ ಬಸವರಾಜ ಪುಲದಿನ್ನಿ ಸೇರಿದಂತೆ ಅನೇಕರಿದ್ದರು.

## "ವಿಶ್ವ ಬಾಲಕಾರ್ಮಿಕ ದಿನವನ್ನು ವಿಶೇಷವಾಗಿ ಆಚರಿಸಲು ಮನವಿ"



❑ ನೈಜ್ಯ ದೆಸೆ ನ್ಯೂಸ್

ಮಾನ್ವಿ: ಜೂನ್ 12 ರಂದು ಆಚರಿಸಲಾಗುವ ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚ ರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿ, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಕ್ರೈಸ್ಟ್ ಸಂಸ್ಥೆ ತಾಲೂಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂಬಂಧ ಕ್ರೈಸ್ಟ್ ಸಂಸ್ಥೆಯ ಸಿರವಾರ ತಾಲೂಕು ಸಂಯೋಜಕಿ ಶಶಿಕಲಾ ಹಾಗೂ ಮಾನ್ವಿ ತಾಲೂಕು ಸಂಯೋಜಕಿ ಗೀತಾ ಅವರು ಸಿರವಾರ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಮಾನ್ವಿ ತಾಲೂಕಿನ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದ್ದಾರೆ. ಮನವಿಯಲ್ಲಿ ಬಾಲಕಾರ್ಮಿಕ ಪದ್ಧತಿ ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದ್ದು, ಸಮಾಜದಿಂದ ಈ ಅನಿಷ್ಟ ಪದ್ಧತಿ ಸಂಪೂರ್ಣ ನಿರ್ಮೂಲನೆ ಆಗಬೇಕಾಗಿದೆ ಎಂದು ತಿಳಿಸಲಾಗಿದೆ. ಹೋಟೆಲ್ಗಳು, ಗ್ಯಾರೇಜ್ಗಳು, ಅಂಗಡಿಗಳು, ಕೃಷಿ ಚಟುವಟಿಕೆಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮಕ್ಕಳನ್ನು ದುಡಿಸಿಕೊಳ್ಳದಂತೆ ಅಧಿಕಾರಿಗಳು ನಿರಂತರ ನಿಗಾ ವಹಿಸಬೇಕು ಎಂದು ಒತ್ತಾಯಿಸಲಾಗಿದೆ.

ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಪುನಃ ಶಾಲೆಗೆ ಸೇರಿಸುವುದು, ಬಾಲಕಾರ್ಮಿಕರಾಗಿ ದುಡಿಯುತ್ತಿರುವ ಮಕ್ಕಳಿಗೆ ಶಿಕ್ಷಣದ ಮುಖ್ಯವಾಹಿನಿಗೆ ಮರಳಲು ಅವಕಾಶ ಕಲ್ಪಿಸುವುದು ಹಾಗೂ ಮಕ್ಕಳ ಹಕ್ಕುಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಬಾಲ್ಯವು ಪ್ರತಿಯೊಂದು ಮಗುವಿನ ಮೂಲಭೂತ ಹಕ್ಕಾಗಿದ್ದು, ಶಿಕ್ಷಣ, ಆರೋಗ್ಯ ಮತ್ತು ಸುರಕ್ಷಿತ ವಾತಾವರಣ ದೊರಕುವಂತೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸಂಸ್ಥೆಯ ಪ್ರತಿನಿಧಿಗಳು ತಿಳಿಸಿದರು. ಈ ಸಂದರ್ಭದಲ್ಲಿ ಮಕ್ಕಳ ಸಂಘಗಳ ಸದಸ್ಯರು ಹಾಗೂ ಸಂಸ್ಥೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮೂಲದಲ್ಲೇ ತ್ಯಾಜ್ಯ ವಿಂಗಡಿಸಿ, ಸ್ವಚ್ಛ ಪಟ್ಟಣ ನಿರ್ಮಿಸಿ: ಆರೋಗ್ಯ ನಿರೀಕ್ಷಕ ಹನುಮಂತ ಯಾದವ್

❑ ನೈಜ್ಯ ದೆಸೆ ನ್ಯೂಸ್

ಬಳಗಾನೂರು: ಘನ ತ್ಯಾಜ್ಯ ನಿರ್ವಹಣೆ ನಿಯಮಗಳು-2026ರ ಕುರಿತು ಬೀದಿಬದಿ ವ್ಯಾಪಾರಸ್ಥರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳಿಗೆ ಜಾಗೃತಿ ಮತ್ತು ಮಾಹಿತಿ ಕಾರ್ಯಕ್ರಮವನ್ನು ಗುರುವಾರ ಬೆಳಿಗ್ಗೆ ಬಳಗಾನೂರು ಪಟ್ಟಣ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಯಿತು.




ಪಟ್ಟಣ ಪಂಚಾಯತ್ ಉಪಾಧ್ಯಕ್ಷ ಹುಸೇನ್ ಭಾಷಾ ಬೂದಗುಂಪ ಹಾಗೂ ಮುಖ್ಯಾಧಿಕಾರಿ ಗೋಪಾಲ ನಾಯಕರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಆರೋಗ್ಯ ನಿರೀಕ್ಷಕ ಹನುಮಂತ ಯಾದವ್ ಮಾತನಾಡಿ, ಸಾರ್ವಜನಿಕರು ಹಾಗೂ ವ್ಯಾಪಾರಸ್ಥರು ತಮ್ಮ ಮನೆ, ಅಂಗಡಿ ಮತ್ತು ವ್ಯಾಪಾರ ಸ್ಥಳಗಳಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ಮೂಲದಲ್ಲಿಯೇ ನಾಲ್ಕು ವಿಭಾಗಗಳಾಗಿ ವಿಂಗಡಿಸಿ ಪಟ್ಟಣ ಪಂಚಾಯತ್ ಕಸದ ವಾಹನಕ್ಕೆ ನೀಡುವಂತೆ ಕರೆ ನೀಡಿದರು.ಹಸಿ ಕಸ, ಒಣ ಕಸ, ಸ್ಯಾನಿಟರಿ ತ್ಯಾಜ್ಯ ಹಾಗೂ ವಿಶೇಷ ಕಾಳಜಿ ತ್ಯಾಜ್ಯ ಎಂಬ ನಾಲ್ಕು ವಿಭಾಗಗಳಾಗಿ ತ್ಯಾಜ್ಯವನ್ನು ಪ್ರತ್ಯೇಕವಾಗಿ ಸಂಗ್ರಹಿಸಿ ನೀಡುವುದರಿಂದ ಪರಿಸರ ಸಂರಕ್ಷಣೆ, ಸಾರ್ವಜನಿಕ ಆರೋಗ್ಯ ಕಾಪಾಡುವಿಕೆ ಹಾಗೂ ಸ್ವಚ್ಛ ಪಟ್ಟಣ ನಿರ್ಮಾಣಕ್ಕೆ ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಹುಸೇನ್ ಭಾಷಾ ಬೂದಗುಂಪ ಹಾಗೂ ಮುಖ್ಯಾಧಿಕಾರಿ ಗೋಪಾಲ ನಾಯಕ್ ಮಾತನಾಡಿ, ಘನ ತ್ಯಾಜ್ಯ ನಿರ್ವಹಣೆ ನಿಯಮಗಳನ್ನು ಪ್ರತಿಯೊಬ್ಬ ನಾಗರಿಕರು ಪಾಲಿಸುವ ಮೂಲಕ ಸ್ವಚ್ಛ ಹಾಗೂ ಸುಂದರ ಬಳಗಾನೂರು ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಕಂದಾಯ ನಿರೀಕ್ಷಕ ಭೀಮಪ್ಪ, ಮಲ್ಲಿಕಾರ್ಜುನ ಹಾಲಾಪೂರು, ಸಿಆರ್‌ಪಿ ಗೀತಾ ಚನ್ನಬಸವ, ಸಮುದಾಯ ಸಂಚಾಲಕಿಯರಾದ ಗೀತಾ ಸುರೇಶ ಹಾಗೂ ದುರುಗಮ್ಮವಿರುಪಾಕ್ಷಿ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಸದಸ್ಯರು ಮತ್ತು ಬೀದಿಬದಿ ವ್ಯಾಪಾರಸ್ಥರು ಭಾಗವಹಿಸಿದ್ದರು. ವರದಿ: ಸುರೇಶ ಬಳಗಾನೂರು.

## ಪ್ರತಿಭಾ ಪುರಸ್ಕಾರದೊಂದಿಗೆ ಸಮಾಜಮುಖಿ ಕೆಲಸ : ಪ್ರಶಾಂತ್ ಕಲ್ಲೂರು ಅಭಿಮತ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಸಾಮಾಜಿಕ ಕಳಕಳಿಯೊಂದಿಗೆ ಯುವ ನಾಯಕ ಹೊಸಕೋಟೆ ಜಗದೀಶ ಅವರು ಪ್ರತಿಭಾವಂತ ಮಕ್ಕಳಿಗೆ ಪ್ರೋತ್ಸಾಹಧನ ನೀಡುವ ಮೂಲಕ ಸಮಾಜಮುಖಿ ಕೆಲಸ ಮಾಡುತ್ತಿದ್ದಾರೆ ಎಂದು ವೀರಶೈವ ಲಿಂಗಾಯತ ಮಹಾ ವೇದಿಕೆ ರಾಜ್ಯಾಧ್ಯಕ್ಷ ಪ್ರಶಾಂತ್ ಕಲ್ಲೂರು ಹೇಳಿದರು.**




ಸ್ಥಳೀಯ ಸಂತೆ ಮಾರುಕಟ್ಟೆ ಬಳಿಯಲ್ಲಿರುವ ವೀರಶೈವ ಭವನದಲ್ಲಿ ವೀರಶೈವ ಲಿಂಗಾಯತ ಮಹಾ ವೇದಿಕೆ ಜಿಲ್ಲಾಧ್ಯಕ್ಷ ಹೊಸಕೋಟೆ ಜಗದೀಶ ಜನ್ಮದಿನದ ಪ್ರಯುಕ್ತ ಗುರುವಾರ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿ, ವೀರಶೈವ ಲಿಂಗಾಯತ ಮಠಗಳು, ಸಂಸ್ಥೆಗಳು ಜಾತಿ, ಬೇಧಭಾವ ' ಇಲ್ಲದೇ, ಪ್ರತಿಯೊಬ್ಬರಿಗೂ ಶಿಕ್ಷಣದ ಜೊತೆಗೆ ಅನ್ನದಾಸೋಹವನ್ನು ಕಲ್ಪಿಸುತ್ತಾ ಬಂದಿವೆ. ಹೊಸಕೋಟೆ ಜಗದೀಶ ಅವರು ಸದಾ ಸಮಾಜದ ಏಳಿಗೆಗೆ ಶ್ರಮಿಸುವ ಜೊತೆಗೆ ಸಾಮಾಜಿಕ ಕಳಕಳಿಯನ್ನು ನಿರಂತರವಾಗಿ ಹೊಂದಲಿ ಎಂದರು. ಎಮ್ಮಿಗನೂರು ಹಂಪಿ ಸಾವಿರ ದೇವರ ಮಹಾಂತ ಮಠದ ಪರಮಪೂಜ್ಯ ವಾಮದೇವ ಮಹಾಂತ ಶಿವಾಚಾರ್ಯ ಮಹಾಸ್ವಾಮಿ ದಿವ್ಯ ಸಾನಿಧ್ಯವಹಿಸಿ ಮಾತನಾಡಿ, ಸಂವಿಧಾನವನ್ನು ಕಟ್ಟಿಕೊಟ್ಟಂತಹ ಸಮಾಜ ವೀರಶೈವ ಸಮಾಜವಾಗಿದೆ. ಸಮಾಜದ ಸಂಸ್ಕೃತಿ ದೊಡ್ಡದಿದೆ. ವೀರಶೈವ ಸಮಾಜದ ಮಠ, ಮಂದಿರ, ಸಂಸ್ಥೆಗಳು ಶಿಕ್ಷಣ ಸಂಸ್ಥೆಗಳನ್ನು ಹುಟ್ಟು ಹಾಕದಿದ್ದರೆ, ಬಹುಕೋಟಿ ಜನರು ಅನಕ್ಷರಸ್ಥರಾಗುತ್ತಿದ್ದರು. ಈ ಶಿಕ್ಷಣದಿಂದಾಗಿ ಸಾಕಷ್ಟು ಮಕ್ಕಳಿಗೆ ಒಳ್ಳೆಯ ಭವಿಷ್ಯದ ಕಡೆಗೆ ವಾಲುವಂತಾಗಿದೆ. ಸಮಾನತೆ ತಂದಂತಹ ಸಮಾಜವಾಗಿದೆ. ಸಮಾಜದ ದೃಷ್ಟಿಕೋನವಾಗಿದೆ.

ಸಂಸ್ಕೃತಿ, ಸಂಸ್ಕಾರದಿಂದ ದೊಡ್ಡತನ ಬೆಳೆಯುತ್ತದೆ. ಅಹಿಂಸೆ, ಸತ್ಯ, ದಾನವನ್ನು ಬೆಳೆಸಿಕೊಳ್ಳಬೇಕು. ವಿದ್ಯಾ ಮತ್ತು ಸಮಾಜಕ್ಕಾಗಿ ಹೊಸಕೋಟೆ ಜಗದೀಶ ಶ್ರಮಿಸುತ್ತಿದ್ದಾರೆ ಎಂದರು. ವೀರಶೈವ ಲಿಂಗಾಯತ ಮಹಾ ವೇದಿಕೆ ಜಿಲ್ಲಾಧ್ಯಕ್ಷ ಹೊಸಕೋಟೆ ಜಗದೀಶ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾ, ಶಿಕ್ಷಣದಲ್ಲಿ ಮಕ್ಕಳ ಭವಿಷ್ಯ ಅಡಗಿದೆ. ಆ ದೃಷ್ಟಿಯಲ್ಲಿ ವಿದ್ಯಾರ್ಥಿಗಳ ಸಾಧನೆಯನ್ನು ಗುರುತಿಸಿ, ಪ್ರೋತ್ಸಾಹಿಸಲಾಗುತ್ತಿದೆ. ಸಮಾಜ ಸಹಕಾರದಿಂದಾಗಿ ಇಂತಹ ದೊಡ್ಡ ಕಾರ್ಯಕ್ರಮದ ಯಶಸ್ವಿಗೆ ಕಾರಣವಾಯಿತು ಎಂದರು. ಕಲ್ಯಾಣಚೌಕಿ ಮಠದ ಬಸವರಾಜ ಶಾಸ್ತ್ರ, ದಿವಾನ್ ಖಾನಾ ಹಜರತ್ ಸೈಯದ್ ಷಾ ಅಬುಲ್ ಹಸನ್ ಖಾದ್ರಿ, ಪಾಸ್ಟರ್ ಪಾಲ್ ಪಂಪಾಪತಿ ಇವರು ದಿವ್ಯ ಸಾನಿಧ್ಯವಹಿಸಿದ್ದರು. ನಂತರ ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಶೇ.90% ಅಂಕಗಳಿಸಿದ ವಿದ್ಯಾರ್ಥಿಗಳಿಗೆ ನಗದು ಬಹುಮಾನದೊಂದಿಗೆ ನೆನಪಿನ ಕಾಣಿಕೆ, ಪ್ರಶಸ್ತಿ ಪ್ರಮಾಣ ಪತ್ರದೊಂದಿಗೆ ಸನ್ಮಾನಿಸಿ ಗೌರವಿಸಲಾಯಿತು.

ಪೌರ ಕಾರ್ಮಿಕರು, ರೈತ ದಂಪತಿ ಶಿವಲಿಂಗನಗೌಡ ದಂಪತಿಗೆ ಗೌರವ ಸನ್ಮಾನ ಮಾಡಲಾಯಿತು. ಈ ಸಂದರ್ಭದಲ್ಲಿ ಅಪೇಕ್ಸ್ ಬ್ಯಾಂಕ್ ಸದಸ್ಯ ಪಿ.ಮೂಕಯ್ಯಸ್ವಾಮಿ, ಅಖಿಲ ಭಾರತ ವೀರಶೈವ ಮಹಾಸಭಾದ ಮಾಜಿ ಅಧ್ಯಕ್ಷ ಚಾನಾಳ್ ಶೇಖರ್, ವೀರಶೈವ ಸಮಾಜದ ಅಧ್ಯಕ್ಷ ಎಸ್.ಎಂ.ನಾಗರಾಜ, ಮಹಾ ವೇದಿಕೆ ಜಿಲ್ಲಾ ಉಪಾಧ್ಯಕ್ಷರಾದ ಬಿ.ವಿ.ಗೌಡ, ಎಸ್.ಚಂದ್ರಶೇಖರಗೌಡ, ತಾಲೂಕಾಧ್ಯಕ್ಷ ಬಳೆ ಮಲ್ಲಿಕಾರ್ಜುನ, ಉಪಾಧ್ಯಕ್ಷ ಕರಿಬಸಯ್ಯಸ್ವಾಮಿ, ಪ್ರಧಾನ ಕಾರ್ಯದರ್ಶಿ ಮನೋಜ್‌ಗೌಡ, ಮುಖಂಡರಾದ ಅರವಿ ಬಸವನಗೌಡ, ಕೆ.ಎಂ.ಹೇಮಯ್ಯಸ್ವಾಮಿ, ಎಸ್.ಎಸ್.ಎಂ.ಚನ್ನಯ್ಯಸ್ವಾಮಿ, ವಾಲಿ ಕೊಟ್ರಪ್ಪ, ಮೆಟ್ರಿ ಹೊನ್ನಳ್ಳಿ ಶಿವಪುತ್ರಪ್ಪ, ವಿ.ವಿದ್ಯಾಧರ, ಜಿ.ಲಿಂಗನಗೌಡ, ಹೊನ್ನಳ್ಳಿ ಗಂಗಾಧರಗೌಡ, ಬರ?ಗಿ ಮಹೇಶಗೌಡ, ಅಳ್ಳಳ್ಳಿ ವಿರೇಶ, ಬಿ.ನಾರಾಯಣಪ್ಪ, ಶಾಂತಿಲಾಲ್, ಆನಂದರೆಡ್ಡಿ, ಅಮರೇಶಗೌಡ, ವಿರುಪಾಕ್ಷಯ್ಯಸ್ವಾಮಿ, ಶಂಭುಲಿಂಗ, ಹಂಪಾರೆಡ್ಡಿ, ಕೋರಿಬಸವರಾಜ, ಅಕ್ಕಮಹಾದೇವಿ, ಶಿಲ್ಪನಾಗರಾಜ ಸೇರಿದಂತೆ ವೀರಶೈವ ಸಮಾಜದವರು ಹಾಗೂ ವಿವಿಧ ಗಣ್ಯರು ಪಾಲ್ಗೊಂಡಿದ್ದರು.

## ದೇವದುರ್ಗದಲ್ಲಿ ಕರವೇ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರ 60ನೇ ಜನ್ಮದಿನ ಆಚರಣೆ

❑ ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ರಾಜ್ಯಾಧ್ಯಕ್ಷ ಅವರ 60ನೇ ಜನ್ಮದಿನವನ್ನು ಕರವೇ ದೇವದುರ್ಗ ತಾಲೂಕು ಘಟಕದ ವತಿಯಿಂದ ಅರ್ಥಪೂರ್ಣವಾಗಿ ಆಚರಿಸಲಾಯಿತು. ಜನ್ಮದಿನದ ಅಂಗವಾಗಿ ದೇವದುರ್ಗ ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಹಣ್ಣು-ಹಂಪಲು ವಿತರಿಸಿ ಸಮಾಜಮುಖಿ ಕಾರ್ಯಕ್ರಮ ನಡೆಸಲಾಯಿತು.**



ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ಅಧ್ಯಕ್ಷ ನಂದಪ್ಪ ಮಡ್ಡಿ, ನಾರಾಯಣಗೌಡರು ಕನ್ನಡ, ಕನ್ನಡಿಗರು ಹಾಗೂ ಕರ್ನಾಟಕದ ಹಿತರಕ್ಷಣೆಗಾಗಿ ನಿರಂತರ ಹೋರಾಟ ನಡೆಸುತ್ತಿರುವ ಪ್ರಮುಖ ಕನ್ನಡಪರ ಹೋರಾಟಗಾರರು ಎಂದು ಹೇಳಿದರು. ಕರ್ನಾಟಕ ರಕ್ಷಣಾ ವೇದಿಕೆಯನ್ನು ರಾಜ್ಯದ ಪ್ರತಿಯೊಂದು ಜಿಲ್ಲೆ, ತಾಲೂಕು ಹಾಗೂ ಗ್ರಾಮ ಮಟ್ಟಕ್ಕೆ ವಿಸ್ತರಿಸಿ ಲಕ್ಷಾಂತರ ಕಾರ್ಯಕರ್ತರನ್ನು ಸಂಘಟಿಸಿರುವುದು ಅವರ ಪ್ರಮುಖ ಸಾಧನೆಯಾಗಿದೆ ಎಂದರು.

ಜಾಲಹಳ್ಳಿ ಹೋಬಳಿ ಘಟಕದ ಅಧ್ಯಕ್ಷ ತಮ್ಮಣ್ಣ ಹೇರುಂಡಿ ಮಾತನಾಡಿ, ಕನ್ನಡ ಭಾಷೆ, ನಾಡು ಮತ್ತು ನುಡಿಯ ಉಳಿವಿಗಾಗಿ ಸಾವಿರಾರು ಯುವಕರನ್ನು ಕನ್ನಡಪರ ಹೋರಾಟದ ಮುಖ್ಯವಾಹಿನಿಗೆ ತರುವಲ್ಲಿ ನಾರಾಯಣಗೌಡರ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಮುಖಂಡ ಶರಣು ಹುಣಸಗಿ ಮಾತನಾಡಿ, ರಾಜ್ಯದಾದ್ಯಂತ ಕನ್ನಡ ನಾಮಫಲಕಗಳ ಅಳವಡಿಕೆ, ಬ್ಯಾಂಕುಗಳು ಹಾಗೂ ಕೇಂದ್ರ ಸರ್ಕಾರಿ ಕಚೇರಿಗಳಲ್ಲಿ ಕನ್ನಡದಲ್ಲಿ ಸೇವೆ ಒದಗಿಸುವುದು ಮತ್ತು ಸ್ಥಳೀಯರಿಗೆ ಉದ್ಯೋಗದಲ್ಲಿ ಆದ್ಯತೆ ನೀಡುವ ಕುರಿತು ಕರವೇ ನಿರಂತರ ಹೋರಾಟ ನಡೆಸಿದೆ ಎಂದು ಹೇಳಿದರು. ರಂಗಪ್ಪ ಬಂಡಿ ಮಾತನಾಡಿ, ಕಾವೇರಿ, ಮಹದಾಯಿ ಹಾಗೂ ಕೃಷ್ಣಾ ನದಿ ನೀರಿನ ವಿಚಾರಗಳಲ್ಲಿ ಕನ್ನಡಿಗರ ಹಿತಾಸಕ್ತಿಗಾಗಿ ನಾರಾಯಣಗೌಡರ ನೇತೃತ್ವದಲ್ಲಿ ಹಲವು ಹೋರಾಟಗಳು ನಡೆದಿವೆ. ಅಲ್ಲದೆ ಗೋವಾ, ಮುಂಬೈ ಹಾಗೂ ಕಾಸರಗೋಡು ಸೇರಿದಂತೆ ಹೊರರಾಜ್ಯಗಳ ಕನ್ನಡಿಗರ ಸಮಸ್ಯೆಗಳಿಗೂ ಕರವೇ ಸ್ಪಂದಿಸಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಂದಪ್ಪ ಮಡ್ಡಿ, ಗುರಾನಾಥ ರೆಡ್ಡಿ, ರಂಗಪ್ಪ ಬಂಡಿ, ಶರಣು ಹುಣಸಗಿ, ಚನ್ನಬಸವ ಮಾಲಿಪಾಟೀಲ್, ಮಲ್ಲು ತೆಗ್ಗಳ್ಳಿ, ಭೀಮರಾಯ ಮಕಾಶಿ, ವೆಂಕಟೇಶ ಜಾಗರಕಲ್, ರವಿಕುಮಾರ, ಸಿದ್ದು ಬಿರಾದಾರ್, ಕಲ್ಯಾಣಪ್ಪ, ತಮ್ಮಣ್ಣ, ರಾಘವೇಂದ್ರ ಸೇರಿದಂತೆ ಅನೇಕ ಪದಾಧಿಕಾರಿಗಳು ಭಾಗವಹಿಸಿದ್ದರು.

ಸಾರ್ವಜನಿಕ ಆಸ್ಪತ್ರೆಯ ಸ್ತ್ರೀರೋಗ ತಜ್ಞರಾದ ಡಾ. ರವಿಕಿರಣ್ ಹಾಗೂ ಆಸ್ಪತ್ರೆಯ ಸಿಬ್ಬಂದಿ ಕಾರ್ಯಕ್ರಮಕ್ಕೆ ಸಹಕಾರ ನೀಡಿದರು. ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಆಟೋ ಎಂಜಿನಿಯರಿಂಗ್ ಟೆಕ್ನಿಷಿಯನ್

ಆಟೋ ಎಂಜಿನಿಯರಿಂಗ್ ಟೆಕ್ನಿಷಿಯನ್ ಕೋರ್ಸ್‌ವು ಆಧುನಿಕ ವಾಹನಗಳ ದೋಷ ಪತ್ತೆ, ದುರಸ್ತಿ ಹಾಗೂ ನಿರ್ವಹಣೆಗೆ ಅಗತ್ಯವಾದ ಪ್ರಾಯೋಗಿಕ ಕೌಶಲ್ಯ ಮತ್ತು ತಾಂತ್ರಿಕ ಜ್ಞಾನವನ್ನು ಒದಗಿಸುತ್ತದೆ. ಈ ಕೋರ್ಸ್‌ನ ಅವಧಿ ಸಾಮಾನ್ಯವಾಗಿ 6 ತಿಂಗಳಿಂದ 3 ವರ್ಷಗಳವರೆಗೆ ಇರುತ್ತದೆ. ಕೋರ್ಸ್ ಪೂರ್ಣಗೊಳಿಸಿದ ನಂತರ ಅಭ್ಯರ್ಥಿಗಳು ಆಟೋಮೊಬೈಲ್ ಟೆಕ್ನಿಷಿಯನ್, ಡಯಾಗ್ನೋಸ್ಟಿಕ್ ಸ್ಪೆಷಲಿಸ್ಟ್ ಅಥವಾ ಸರ್ವಿಸ್ ಅಡ್ವೈಸರ್‌ಗಳಾಗಿ ಉದ್ಯೋಗ ಪಡೆಯಬಹುದು. ಕೋರ್ಸ್ ರಚನೆ ಮತ್ತು ಪಠ್ಯಕ್ರಮ ಈ ಕೋರ್ಸ್‌ನಲ್ಲಿ ಸೈದ್ಧಾಂತಿಕ ತರಗತಿಗಳು ಹಾಗೂ ಕಾರ್ಯಾಗಾರಗಳಲ್ಲಿ (Workshop) ಪ್ರಾಯೋಗಿಕ ತರಬೇತಿ ಎರಡನ್ನೂ ಒಳಗೊಂಡಿರುತ್ತದೆ.

**ಪ್ರಮುಖ ವಿಷಯಗಳು:**

1. ಎಂಜಿನ್ ಡಯಾಗ್ನೋಸ್ಟಿಕ್ಸ್ ಮತ್ತು ಮೆಕ್ಯಾನಿಕ್ಸ್
ಪೆಟ್ರೋಲ್ ಮತ್ತು ಡೀಸೆಲ್ ಎಂಜಿನ್‌ಗಳ ಕಾರ್ಯವಿಧಾನ
ಕ್ಲಚ್ ಮತ್ತು ಟ್ರಾನ್ಸ್‌ಮಿಷನ್ ವ್ಯವಸ್ಥೆಗಳ ನಿರ್ವಹಣೆ
ಎಂಜಿನ್ ಸರ್ವಿಸಿಂಗ್ ಮತ್ತು ದೋಷ ಪತ್ತೆ

2. ವಾಹನ ವ್ಯವಸ್ಥೆಗಳು
ಸ್ಟೀರಿಂಗ್ ವ್ಯವಸ್ಥೆ
ಬ್ರೇಕಿಂಗ್ ವ್ಯವಸ್ಥೆ
ಚಾಸಿಸ್ ಮತ್ತು ಸಸ್ಪೆನ್ಷನ್ ವ್ಯವಸ್ಥೆಗಳು

3. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಬ್ಯಾಟರಿ ವ್ಯವಸ್ಥೆಗಳು
ವಾಹನಗಳ ವೈರಿಂಗ್ ಎಲೆಕ್ಟ್ರಾನಿಕ್ ಡಯಾಗ್ನೋಸ್ಟಿಕ್ ಉಪಕರಣಗಳ ಬಳಕೆ

4. ಆಧುನಿಕ ತಂತ್ರಜ್ಞಾನಗಳ
ಎಲೆಕ್ಟ್ರಿಕ್ ವಾಹನಗಳು (ಇಗಿ)
ಹೈಬ್ರಿಡ್ ವಾಹನಗಳು
ADAS (Advanced Driver Assistance Systems)
ಮಾಲಿನ್ಯ ನಿಯಂತ್ರಣ ಮತ್ತು ಎಮಿಷನ್ ಮಾನದಂಡಗಳು

5. ವರ್ಕ್‌ಶಾಪ್ ನಿರ್ವಹಣ
ಸುರಕ್ಷತಾ ನಿಯಮಗಳು
ಪ್ರಮಾಣಿತ ಕಾರ್ಯವಿಧಾನಗಳು (SOP)
ಪ್ರಮಾಣಪತ್ರ (Certificate) ಕೋರ್ಸ್‌ಗಳು
ಅವಧಿ: 6 ತಿಂಗಳು ? 1 ವರ್ಷ
ವೇಗವಾಗಿ ಉದ್ಯೋಗ ಪಡೆಯಲು ಅನುಕೂಲ
ವಾಹನ ಸರ್ವಿಸ್ ಮತ್ತು ರಿಪೇರಿ ಕ್ಷೇತ್ರದಲ್ಲಿ ಪ್ರಾರಂಭಿಕ ತರಬೇತಿ ಡಿಪ್ಲೊಮಾ ಇನ್ ಆಟೋಮೊಬೈಲ್ ಎಂಜಿನಿಯರಿಂಗ್
ಅವಧಿ: 3 ವರ್ಷ
ಎಸ್‌ಎಸ್‌ಎಲ್‌ಸಿ (10ನೇ ತರಗತಿ) ನಂತರ ಪ್ರವೇಶ
ಆಟೋಮೊಬೈಲ್ ತಂತ್ರಜ್ಞಾನ ಹಾಗೂ ಎಂಜಿನಿಯರಿಂಗ್ ಮೂಲಭೂತ ತತ್ವಗಳ ಅಧ್ಯಯನ

**ಉದ್ಯೋಗಾವಕಾಶಗಳು**

ಕೋರ್ಸ್ ಪೂರ್ಣಗೊಳಿಸಿದ ನಂತರ ಕೆಳಕಂಡ ಹುದ್ದೆಗಳಲ್ಲಿ ಕೆಲಸ ಪಡೆಯಬಹುದು:
ಆಟೋಮೊಬೈಲ್ ಟೆಕ್ನಿಷಿಯನ್
ಸರ್ವಿಸ್ ಟೆಕ್ನಿಷಿಯನ್
ವಾಹನ ಡಯಾಗ್ನೋಸ್ಟಿಕ್ ತಜ್ಞ
ಸರ್ವಿಸ್ ಅಡ್ವೈಸರ್
ವರ್ಕ್‌ಶಾಪ್ ಸೂಪರ್‌ವೈಸರ್
ಇವಿ (ಇಗಿ) ತಂತ್ರಜ್ಞ
ಗುಣಮಟ್ಟ ನಿಯಂತ್ರಣ ತಂತ್ರಜ್ಞ
ಕರ್ನಾಟಕದಲ್ಲಿ ತರಬೇತಿ ಅವಕಾಶಗಳು
ಕರ್ನಾಟಕದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು ಹಾಗೂ ಖಾಸಗಿ ಆಟೋಮೊಬೈಲ್ ತರಬೇತಿ ಸಂಸ್ಥೆಗಳು ಡಿಪ್ಲೊಮಾ ಮತ್ತು ಪ್ರಮಾಣಪತ್ರ ಕೋರ್ಸ್‌ಗಳನ್ನು ನಡೆಸುತ್ತಿವೆ.
ವಿಶೇಷವಾಗಿ ಎಲೆಕ್ಟ್ರಿಕ್ ವಾಹನ (ಇಗಿ) ತಂತ್ರಜ್ಞಾನದಲ್ಲಿ ಪರಿಣತಿ ಪಡೆಯಲು ವಿವಿಧ ವಿಶೇಷ ತರಬೇತಿ ಕಾರ್ಯಕ್ರಮಗಳು ಲಭ್ಯವಿವೆ.
ಈ ಕೋರ್ಸ್‌ವು ವಾಹನ ಉದ್ಯಮದಲ್ಲಿ ಯಶಸ್ವಿ ವೃತ್ತಿಜೀವನವನ್ನು ರೂಪಿಸಿಕೊಳ್ಳಲು ಬಯಸುವ ವಿದ್ಯಾರ್ಥಿಗಳಿಗೆ ಉತ್ತಮ ಅವಕಾಶವಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# "ದೀರ್ಘಕಾಲ ಪ್ರಧಾನಿಯಾಗಿ ದಾಖಲೆ ಬರೆದ ಮೋದಿಜಿ ಹೆಸರಲ್ಲಿ ವಿಶೇಷ ಪೂಜೆ"

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಶ್ರೀ ಈಶ್ವರ ದೇವಸ್ಥಾನದಲ್ಲಿ ಮಾನ್ಯ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ-ಜಿಯವರು 2026ರ ಜೂನ್ 10 ರಂದು ಸತತವಾಗಿ ಅತಿ ಹೆಚ್ಚು ಅವಧಿಗೆ ಸೇವೆ ಸಲ್ಲಿಸಿದ ಚುನಾಯಿತ ಪ್ರಧಾನಮಂತ್ರಿ ಎಂಬ ವಿಶಿಷ್ಟ ಗೌರವಕ್ಕೆ ಪಾತ್ರರಾಗಿರುವ ಸಂದರ್ಭದಲ್ಲಿ ಮಾನ್ವಿ ಬಿಜೆಪಿ ಮಂಡಲ ವತಿಯಿಂದ ವಿಶೇಷ ಪೂಜೆ ಹಾಗೂ ಪ್ರಾರ್ಥನೆಯನ್ನು ಮಾಡಲಾಯಿತು.**

ಇದು ದೇಶದ ಇತಿಹಾಸದಲ್ಲೇ ಒಂದು ಅವಿಸ್ಮರಣೀಯ ದಿನ ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಸತತವಾಗಿ ಆಯ್ಕೆಯಾಗಿ 4,399 ದಿನಗಳ ಕಾಲ ಪ್ರಧಾನಮಂತ್ರಿಯಾಗಿ ಸೇವೆ ಸಲ್ಲಿಸುವ ಮೂಲಕ ಭಾರತದ ಇತಿಹಾಸದಲ್ಲೇ ಅತ್ಯಧಿಕ ಅವಧಿ ಅಧಿಕಾರದಲ್ಲಿರುವ ಚುನಾಯಿತ ಪ್ರಧಾನಮಂತ್ರಿಯಾಗಿ ನೆಹರು ಅವರನ್ನು ಹಿಂದಿಕ್ಕಿ ದೀರ್ಘಾವಧಿಯ ಪ್ರಧಾನಿ ಎನಿಸಿಕೊಂಡ ಶ್ರೀ ನರೇಂದ್ರ ಮೋದಿ ಹೊಸ ದಾಖಲೆ ನಿರ್ಮಿಸಿದ್ದಾರೆ.



ಮೋದಿ ಜಿ ಅವರ ನೇತೃತ್ವದಲ್ಲಿ 'ಏಕ ಭಾರತ, ಶ್ರೇಷ್ಠ ಭಾರತ'ದ ಸಂಕಲ್ಪ, ವಿಶ್ವಮಟ್ಟದ ಮೂಲಸೌಕರ್ಯ, ಡಿಜಿಟಲ್ ಕ್ರಾಂತಿ, ಶುದ್ಧ ಇಂಧನ ಕ್ಷೇತ್ರದಲ್ಲಿ ಪ್ರಗತಿ, ಆತ್ಮನಿರ್ಭರ ಭಾರತದ ನಿರ್ಮಾಣ ?ದೂರದೃಷ್ಟಿ ನಾಯಕತ್ವ, ಅಭಿವೃದ್ಧಿಯ ಪಯಣ ಹಾಗೂ ಭಾರತವನ್ನು ವಿಶ್ವದ ಮುಂಚೂಣಿ ರಾಷ್ಟ್ರವನ್ನಾಗಿ ರೂಪಿಸುವ ಅವರ ಸಂಕಲ್ಪಕ್ಕೆ 12 ವರ್ಷದ ಗರಿಮೆ ಅವಿಸ್ಮರಣೀಯ ಸಂಗತಿಯಾಗಿದೆ ಮಾನ್ವಿ ಬಿಜೆಪಿ ಅಧ್ಯಕ್ಷರಾದ ವೀರಭದ್ರಗೌಡ ಭೋಗಾವತಿ ತಿಳಿಸಿದರು.

ಮಾನ್ವಿ ಮಂಡಲ ಪ್ರಧಾನ ಕಾರ್ಯದರ್ಶಿ ಗುರುಸಿದ್ದಪ್ಪ ಕಣ್ಣೂರು, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷರಾದ ದೊರೆಬಾಬು, ವೀರನಗೌಡ ವಕೀಲರು ಪೋತ್ನಾಳ, ಶಿವಲಿಂಗಯ್ಯ ಸ್ವಾಮಿ, ಜಗದೀಶ ಒತೂರು, ಕುಮಾರಸ್ವಾಮಿ ಮೇದಾ, ಉಮಾಪತಿ ನಾಯಕ, ಚಂದ್ರಶೇಖರ ನಾಯಕ, ಕೆ.ವೆಂಕಟೇಶ, ವಿಜಯಕುಮಾರ ಮೇಟಿ, ರಾಜೇಂದ್ರ ಭೋಗಾವತಿ, ಈರಣ್ಣ ನಾಯಕ, ಗೋಪಾಲ ಇಬ್ರಾಂಪುರ್, ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ವೀರಶೈವ ಲಿಂಗಾಯತ ಮಹಾವೇದಿಕೆ ತಾಲೂಕು ಕಛೇರಿ ಉದ್ಘಾಟಿಸಿ ಪ್ರಶಾಂತ್ ಕಲ್ಲೂರು

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಪಟ್ಟಣದ ಬಳ್ಳಾರಿ ರಸ್ತೆಯ ಇಂಡಿಯನ್ ಪೆಟ್ರೋಲ್ ಬಂಕ್ ಬಳಿಯಲ್ಲಿ ವೀರಶೈವ ಲಿಂಗಾಯತ ಮಹಾ ವೇದಿಕೆಯ ತಾಲೂಕು ಘಟಕ ಕಚೇರಿಯನ್ನು ಜಿಲ್ಲಾಧ್ಯಕ್ಷ ಹೊಸಕೋಟೆ ಜಗದೀಶ, ತಾಲೂಕಾಧ್ಯಕ್ಷ ಬಳೆ ಮಲ್ಲಿಕಾರ್ಜುನ ಸಮ್ಮುಖದಲ್ಲಿ ರಾಜ್ಯಾಧ್ಯಕ್ಷ ಪ್ರಶಾಂತ್ ಕಲ್ಲೂರ್ ಗುರುವಾರ ಉದ್ಘಾಟಿಸಿದರು.**

ಇಲ್ಲಿನ ನಂ.10 ಮುದ್ದಾಪುರದ ಯಲ್ಲಮ್ಮಕ್ಯಾಂಪ್ ಬಳಿಯಲ್ಲಿ ರಾಜ್ಯಾಧ್ಯಕ್ಷರನ್ನು ಅದ್ದೂರಿಯಾಗಿ ಸ್ವಾಗತಿಸಿ, ನಂತರ ಅಲ್ಲಿಂದ ನೂರಾರು ಬೈಕ್‌ಗಳೊಂದಿಗೆ ರ?ಯಾಲಿ ಮೂಲಕ ಪ್ರಥಮ ದರ್ಜೆ ಕಾಲೇಜು ಮೂಲಕ ನೂತನ ತಾಲೂಕು ಕಛೇರಿಗೆ ಆಗಮಿಸಿ, ರಿಬ್ಬನ್ ಕಟ್ ಮಾಡುವ ಮೂಲಕ ಅತ್ಯಂತ ವಿಜೃಂಭಣೆಯಿಂದ ಉದ್ಘಾಟಿಸಿದರು. ತದನಂತರ ರಾಜ್ಯಾಧ್ಯಕ್ಷ, ಜಿಲ್ಲಾಧ್ಯಕ್ಷ-ರಿಗೆ ಗೌರವ ಸನ್ಮಾನ ಸಲ್ಲಿಸಲಾಯಿತು. ಇದರ ಜೊತೆಗೆ ಜಿಲ್ಲಾಧ್ಯಕ್ಷ ಹೊಸಕೋಟೆ ಜಗದೀಶ ಅವರ ಜನ್ಮದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.



ಈ ಸಂದರ್ಭದಲ್ಲಿ ಕಲ್ಯಾಣಚೌಕಿ ಮಠದ ಬಸವರಾಜ ಶಾಸ್ತ್ರಿ, ಅಪೆಕ್ಸ್ ಬ್ಯಾಂಕ್ ನಿರ್ದೇಶಕ ಪಿ.ಮೂಕಯ್ಯಸ್ವಾಮಿ, ವೀರಶೈವ ಸಂಘದ ತಾಲೂಕು ಅಧ್ಯಕ್ಷ ಎಸ್.ಎಂ.ನಾಗರಾಜ, ಮಹಾ ವೇದಿಕೆ ಉಪಾಧ್ಯಕ್ಷರಾದ ಬಿ.ವಿ.ಗೌಡ, ಎಸ್.ಚಂದ್ರಶೇಖರಗೌಡ, ಮುಖಂಡರಾದ ಅರವಿ ಬಸವನಗೌಡ, ಕೆ.ಎಂ.ಹೇಮಯ್ಯಸ್ವಾಮಿ, ಇಟಗಿ ಬಸವರಾಜಗೌಡ, ಕನಕಗಿರಿ ರೇಣುಕಾಗೌಡ, ಅಮರೇಗೌಡ, ಕರಿಬಸಯ್ಯಸ್ವಾಮಿ, ಜೀರ್ ಅಯ್ಯಪ್ಪ, ವಿ.ಬಿ.ನಾಗರಾಜ ಸೇರಿದಂತೆ ವೀರಶೈವ ಸಮಾಜ ಸೇರಿದಂತೆ ಎಲ್ಲಾ ಸಮಾಜದ ಬಂಧುಗಳು ಪಾಲ್ಗೊಂಡಿದ್ದರು.

ತದನಂತರ ಕಛೇರಿಯಿಂದ ಹೊರಟ ಬೈಕ್ ರ?ಯಾಲಿ ಮುಂದುವರೆಸಿ, ವಾಲ್ಮೀಕಿ, ಅಂಬೇಡ್ಕರ್ ವೃತ್ತದಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು. ನಂತರ ರಾಜ್ಯಾಧ್ಯಕ್ಷ ಪ್ರಶಾಂತ್ ಕಲ್ಲೂರು, ಜಿಲ್ಲಾಧ್ಯಕ್ಷ ಹೊಸಕೋಟೆ ಜಗದೀಶಗೆ ಕ್ರೇನ್‌ಗಳ ಮೂಲಕ ಬೃಹತ್ ಹೂವಿನ ಹಾರ ಹಾಕುವ ಮೂಲಕ ಅದ್ದೂರಿಯಾಗಿ ಸ್ವಾಗತಿಸಲಾಯಿತು. ಇಲ್ಲಿನ ಐತಿಹಾಸಿಕ ಪೇಟೆ ಬಸವೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆಯೊಂದಿಗೆ ಮಹಾಮಂಗಳಾರತಿ ಮೂಲಕ ದರ್ಶನ ಪಡೆದು, ವೇದಿಕೆ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

# ವಡ್ಲೂರು ಗ್ರಾಮದಲ್ಲಿ ಶಾಲೆ, ಮನೆ, ಗುಂಪು ಸಭೆ ಮೂಲಕ ಜಾಗೃತಿ



❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಭೂಮಿಯ ಆಳದಿಂದ ಬೋರ್‌ಬೆಲ್ ಮೂಲಕ ಕುಡಿಯಲು ಬಳಸುವ ನೀರಿನಲ್ಲಿ ಅತಿಯಾದ ಫ್ಲೋರೈಡ್ ಅಂಶವು ಕಂಡುಬಂದಲ್ಲಿ ಉಂಟಾಗುವ ಆರೋಗ್ಯದ ಸಮಸ್ಯೆಗಳು ಕೇವಲ ವೈಯಕ್ತಿಕ ಸಮಸ್ಯೆಯಲ್ಲಾ, ಸಾಮಾಜಿಕ ಸಮಸ್ಯೆಯಾಗಿದೆ, ಹದಿಹರೆಯರದಲ್ಲೂ ವಯಸ್ಕರಂತೆ ಕಾಣುತ್ತಾರೆ. ಆದ್ದರಿಂದ ಕುಡಿಯಲು ಅಧಿಕ ಫ್ಲೋರೈಡ್‌ಯುಕ್ತ ನೀರು ಬಳಸದೆ ಮಳೆಯಾದರೀತ ನೀರನ್ನು ಕುಡಿಯಲು ಆಧ್ಯತೆ ನೀಡಲು ಜಿಲ್ಲಾ ಫ್ಲೋರೋಸಿಸ್ ಸಲಹೆಗಾರರಾದ ಗುರುಪ್ರಸಾದ್ ತಿಳಿಸಿದರು.**

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಜಿಲ್ಲಾ ಫ್ಲೋರೋಸಿಸ್ ನಿಯಂತ್ರಣ ಕಾರ್ಯಕ್ರಮದಡಿ ರಾಯಚೂರು ತಾಲೂಕಿನ ವಡ್ಲೂರು ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ದಂತ ಫ್ಲೋರೈಡ್ ತಪಾಸಣೆ ಕೈಗೊಂಡು ಮಾತನಾಡುತ್ತಾ, ಫ್ಲೋರೈಡ್ ಪ್ರಮುಖವಾಗಿ ಹಲ್ಲು ಮತ್ತು ಮೂಳೆಗಳ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ, ಒಂದು ಬಾರಿ ಫ್ಲೋರೈಡ್ ಅಧಿಕ ಮಟ್ಟದಲ್ಲಿ ದೇಹ ಸೇರಿದಾಗ ಮೊಣಕಾಲು ಒಳಕ್ಕೆ ಅಥವಾ ಹೊರಕ್ಕೆ ಬಾಗಿ ಜೀವನ ಪರ್ಯಂತ ಉಳಿಯುವಂತೆ ಮಾಡುತ್ತದೆ.

ವಿವಿಧ ವಿಧಗಳು ಮತ್ತು ಲಕ್ಷಣಗಳು: ದಂತ ಫ್ಲೋರೋಸಿಸ್, ಇದು ಹೆಚ್ಚಾಗಿ 8 ವರ್ಷದೊಳಗಿನ ಮಕ್ಕಳಲ್ಲಿ ಕಂಡುಬರುತ್ತದೆ. ಹಲ್ಲುಗಳ ಮೇಲೆ ಬಿಳಿ ಚುಕ್ಕೆಗಳು, ಹಳದಿ ಅಥವಾ ಕಂದು ಬಣ್ಣದ ಗೆರೆಗಳು ಮೂಡುವುದು ಇದರ ಮುಖ್ಯ ಲಕ್ಷಣವಾಗಿದೆ. ಅಸ್ಥಿಪಂಜರದ ಫ್ಲೋರೋಸಿಸ್: ದೀರ್ಘಾವಧಿಯ ಫ್ಲೋರೈಡ್ ಸೇವನೆಯಿಂದ ಮೂಳೆಗಳು ಮತ್ತು ಕೀಲುಗಳ ಮೇಲೆ ಪ್ರಭಾವ ಬೀರುತ್ತದೆ. ಕೀಲು ನೋವು, ಬೆನ್ನು ನೋವು, ಮೂಳೆಗಳು ಗಟ್ಟಿಯಾಗುವುದು ಮತ್ತು ವಿಕಲಾಂಗತೆಗೆ ಕಾರಣವಾಗುವುದು ಇದರ ತೀವ್ರ ಲಕ್ಷಣಗಳಾಗಿವೆ ಎಂದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ ಮನೆಗಳಿಗೆ ಬೇಟಿ ಮಾಡಿ, ಸಾರ್ವಜನಿಕರಿಗೆ ಮಾಹಿತಿ ನೀಡುತ್ತಾ, ಫ್ಲೋರೈಡ್‌ನಿಂದಾಗುವ ಹಾನಿ ತಡೆಯಲು ಜಿಲ್ಲಾ ಪಂಚಾಯತಿಯು ಗ್ರಾಮ ಪಂಚಾಯತಗಳ ಮೂಲಕ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆ ಮಾಡಿದ್ದು, ಸದರಿ ನೀರನ್ನು ಕುಡಿಯಲು ಬಳಸುವುದಕ್ಕೆ ಆದ-್ಯತೆ ನೀಡಿ ಮತ್ತು ಶುದ್ಧೀಕರಿಸಿದ ಕುಡಿಯುವ ನೀರನ್ನು (ಬೋರ್‌ವೆಲ್ ನೀರನ್ನು ಪರೀಕ್ಷಿಸಿ ಬಳಸುವುದು ಉತ್ತಮ) ಬಳಸುವುದು. ಅಲ್ಲದೆ ಆಹಾರ ಸೇವಿಸುವಾಗ ವಿಟಮಿನ್ ಸಿ, ಕ್ಯಾಲ್ಸಿಯಂ ಮತ್ತು ಕಬ್ಬಿಣಾಂಶವಿರುವ ಆಹಾರಗಳಾದ (ಉದಾ: ಅಡುಗೆಗೆ ಹುಣಸೆಹಣ್ಣು, ಹಸಿರು ತರಕಾ-ರಿಗಳು, ರಾಗಿ, ನುಗ್ಗೆಕಾಯಿ, ನೆಲ್ಲಿಕಾಯಿ, ಹಾಗೂ ಹಣ್ಣುಗಳಾದ ಕಿತ್ತಳೆ, ಮೋಸಂಬಿ, ಹಾಗೂ ಹಾಲು ಬೆಲ್ಲ, ಮುಂತಾದವುಗಳನ್ನು ಫ್ಲೋರೋಸಿಸ್ ತೀವ್ರತೆಯನ್ನು ಕಡಿಮೆ ಮಾಡಲು ಬಳಸಬಹುದಾಗಿದೆ.

# ಅಗ್ನಿಶಾಮಕ ಠಾಣೆಯ ನೂತನ ಕಟ್ಟಡ ಉದ್ಘಾಟನೆ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಅಗ್ನಿಶಾಮಕ ಠಾಣೆಯ ಕಟ್ಟಡವನ್ನು ಕೆ ಎಸ್ ಡಿ ಎಲ್ ಅಧ್ಯಕ್ಷ ಹಾಗೂ ಮುದ್ದೇಬಿಹಾಳ ಮತಕ್ಷೇತ್ರ ಶಾಸಕರಾದ ಅಪ್ಪಾಜಿ ನಾಡಗೌಡರು ಗುರುವಾರ ಉದ್ಘಾಟಿಸಿದರು.**

ಈ ಸಂದರ್ಭದಲ್ಲಿ ಮಾತನಾಡಿದ ಅವರು ತಾಳಿಕೋಟಿ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಯಾವುದೇ ರೀತಿಯ ಅವಘಡಗಳು ಹಾಗೂ ನೈಸರ್ಗಿಕ ವಿಕೋಪಗಳು ಸಂಭವಿಸಿದಾಗ ತುರ್ತು ಸೇವೆಯನ್ನು ನೀಡಲು 24 ಗಂಟೆಯವರೆಗೆ ಕಾರ್ಯನಿರ್ವಹಿಸುವ ಈ ಠಾಣೆಗೆ ಎಲ್ಲ ರೀತಿಯಿಂದಲೂ ಸುಸಜ್ಜಿತವಾದ ಕಟ್ಟಡದ ಅವಶ್ಯಕತೆ ಇತ್ತು ಇದರ ನಿರ್ಮಾಣ-ಕ್ಕಾಗಿ ವಿಶೇಷ ಆಸಕ್ತಿ ವಹಿಸಿ ಅನುದಾನವನ್ನು ಬಿಡುಗಡೆ ಗೊಳಿಸಿ ಕೆಲಸ ಮಾಡಿಸಿದ್ದೇನೆ. ಇಲ್ಲಿರುವ ಸಿಬ್ಬಂದಿಗಳಿಗೆ ವಸತಿ ಗೃಹಗಳ ಅವಶ್ಯಕತೆ ಇದ್ದು ಇದರ ಬೇಡಿಕೆಯನ್ನು ಇಟ್ಟಿದ್ದಾರೆ ಅವುಗಳನ್ನು ಸಹ ಮುಂದಿನ ದಿನಗಳಲ್ಲಿ ಆದಷ್ಟು ಬೇಗ ಮಂಜೂರು ಮಾಡಿಕೊಳ್ಳಲು ಸರ್ಕಾರದ ಮಟ್ಟದಲ್ಲಿ ಶಕ್ತಿಮೀರಿ ಪ್ರಯತ್ನಿಸುತ್ತೇನೆ ಎಂದರು. ಇದೇ ಸಂದರ್ಭದಲ್ಲಿ ಠಾಣೆಗೆ ಮಂಜೂರಾದ ನೂತನ ವಾಹನವನ್ನೂ ಶಾಸಕ ಅಪ್ಪಾಜಿ ನಾಡಗೌಡರು ಉದ್ಘಾಟಿಸಿದರು.




ಅಗ್ನಿಶಾಮಕ ಠಾಣೆಯ ಹುಬ್ಬಳ್ಳಿ ವಲಯ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿ ಮಂಜುನಾಥ ಸಾಲಿ ಹಾಗೂ ಸಿಬ್ಬಂದಿಗಳು ಶಾಸಕ ನಾಡಗೌಡರಿಗೆ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಮುಸ್ಲಿಂ ಧಾರ್ಮಿಕ ಮುಖಂಡ ಸಯ್ಯದ್ ಶಕೀಲ ಅಹ್ಮದ್ ಖಾಜಿ, ತಾಳಿಕೋಟಿ ಅಗ್ನಿಶಾಮಕ ಠಾಣೆ ಪ್ರಭಾರಿ ಅಫ್ರೋಜ್ ಕಂದಗಲ್, ಮುಖಂಡರಾದ ಎಂ.ಜಿ.ಪಾಟೀಲ, ಬಿ.ಎನ್.ಹಿಪ್ಪರಗಿ, ಸುರೇಶಧಣಿ ನಾಡಗೌಡ ಬಿಂಜಲಭಾವಿ, ಪ್ರಭುಗೌಡ ಮದರಕಲ್ಲ, ಸಿದ್ದನಗೌಡ ಪಾಟೀಲ ನಾವದಗಿ, ಸಿ.ಎಸ್. ಮಾಳಿ, ಶರಣುಧಣಿ ದೇಶಮುಖ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಸಂಗನಗೌಡ ಅಸ್ಕಿ, ಗುತ್ತಿಗೆದಾರ ಹಣಮಂತ ನಾಯಕ, ಇಬ್ರಾಹಿಂ ಮನ್ಸೂರ, ಮೋದಿನಸಾ ನಗಾರ್ಚಿ, ಫಯಾಜ ಉತ್ನಾಳ, ಸಿಕಂದರ್ ಡೋಣಿ, ಸದ್ದಾಮ ಹೊನ್ನಳ್ಳಿ ಹಾಗೂ ಅಗ್ನಿ ಶಾಮಕ ಠಾಣೆಯ ಸಿಬ್ಬಂದಿಗಳು ಮತ್ತಿತರರು ಇದ್ದರು.

# ಜನವಸತಿ ಪ್ರದೇಶದಲ್ಲಿ ಕೈಗಾರಿಕಾ ಘಟಕ ಸ್ಥಾಪನೆ ಬೇಡ ಕರ್ನಾಟಕ ರೈತ ಸಂಘ ಹಾಗೂ ಎಐಕೆಕೆಎಸ್ ಒತ್ತಾಯ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ವಿರೂಪಾಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ 4ನೇ ಮೈಲ್ ಕ್ಯಾಂಪ್‌ನ ಸರ್ವೆ ನಂ.38/17 ರಲ್ಲಿ 00.12 ಗುಂಟೆ ಜಮೀನನ್ನು ವಿ.ಲಕ್ಷ್ಮಿಕಾಂತ್ ತಂದೆ ಭಾಸ್ಕರರಾವ್ ಎಂಬಾತನ ಹೆಸರಲ್ಲಿ ಕೈಗಾರಿಕಾ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿರುವ ಕ್ರಮವನ್ನು ಕರ್ನಾಟಕ ರೈತ ಸಂಘ, ಎಐಕೆಕೆಎಸ್, ಗ್ರಾಮ ಘಟಕ, ಖಂಡಿಸುತ್ತದೆ ಎಂದು ಅಧ್ಯಕ್ಷ ಗೌಡಪ್ಪ ಜಾಲಿಹಾಳ ಹೇಳಿದರು.**

ಇದು ಕೇವಲ ಭೂ ಪರಿವರ್ತನೆಯ ಪ್ರಶ್ನೆಯಲ್ಲ ಜನವಸತಿ ಪ್ರದೇಶದ ಮಧ್ಯೆ ಪರಿಸರ, ಜನರ ಆರೋಗ್ಯ, ಕೃಷಿ ಭೂಮಿ ಹಾಗೂ ಜಾನುವಾರುಗಳ ಬದುಕಿನ ಮೇಲೆ ನೇರ ದಾಳಿ ನಡೆಸುವ ಹುನ್ನಾರವಾಗಿದೆ. ಜನರ ವಿರೋಧವನ್ನು ಲೆಕ್ಕಿಸದೆ ಕೆಲವು ಅಧಿಕಾರಿಗಳು ಕೈಗೊಂಡಿರುವ ಈ ಜನವಿರೋಧಿ ಕ್ರಮಗಳು ಸ್ಥಳೀಯ ನಿವಾಸಿಗಳಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿವೆ. ಈ ಹಿಂದೆ ಇದೇ ವ್ಯಕ್ತಿಯು ಅನಧಿಕೃತವಾಗಿ ಪೀಠೋಪಕರಣ ಕೈಗಾರಿಕಾ ಘಟಕವನ್ನು ಸ್ಥಾಪಿಸಿದ ಸಂದರ್ಭದಲ್ಲಿ ಪರಿಸರ ಮಾಲಿನ್ಯ, ನೀರು ಮತ್ತು ಗಾಳಿಯ ಕಲುಷಿತತೆ, ಸಾಂಕ್ರಾಮಿಕ ರೋಗಗಳ ಭೀತಿ ಹಾಗೂ ಕೃಷಿ ಭೂಮಿಯ ನಾಶದ ವಿರುದ್ಧ ಪರಿಸರ ರಕ್ಷಣಾ ವೇದಿಕೆ, ಸಿಂಧನೂರು ಮತ್ತು ಸ್ಥಳೀಯ ಜನರು ಮತ್ತು ಕರ್ನಾಟಕ ರೈತ ಸಂಘ ಸತತ ಒಂದೂವರೆ ವರ್ಷಗಳ ಕಾಲ ಹೋರಾಟ ನಡೆಸಲಾಗಿತ್ತು. ಆ ಹೋರಾಟದ ಫಲವಾಗಿ ದಿನಾಂಕ 27-01-2026 ರಂದು ವಿರೂಪಾಪುರ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ವಿಷಯವನ್ನು ಗಂಭೀರವಾಗಿ ಚರ್ಚಿಸಿ, ಘಟಕವನ್ನು ಸ್ಥಗಿತಗೊಳಿಸುವ ನಿರ್ಣಯವನ್ನು ಅಂಗೀಕರಿಸಿ, ಸಂಬಂಧಿಸಿದ ಇಲಾಖೆಗಳ ಮೂಲಕ ಘಟಕವನ್ನು ಬಂದ್ ಮಾಡಿಸಲಾಗಿತ್ತು.



ಈಗ ಹಿಂದಿನ ಸಾಮಾನ್ಯ ಸಭೆಯ ನಿರ್ಣಯವನ್ನು ಧಿಕ್ಕರಿಸಿ, ಮತ್ತೆ ಕೈಗಾರಿಕಾ ಘಟಕಕ್ಕೆ ನಿರಾಪೇಕ್ಷಣ ಪತ್ರ (ಎನ್‌ಒಸಿ) ಸಮ್ಮತಿ ನೀಡುವುದು ಗ್ರಾಮಪಂಚಾಯತಿ ಜನಪರ ಬದ್ಧತೆಗೆ ವಿರುದ್ಧವಾದ ಕ್ರಮವಾಗಲಿದೆ. ಇದು ಸ್ಥಳೀಯ ಜನರ ಆರೋಗ್ಯ, ಪರಿಸರ ಹಾಗೂ ಜೀವನೋಪಾಯದ ಮೇಲೆ ವಿನಾಶಕಾರಿ ಪರಿಣಾಮ ಬೀರುವುದರಲ್ಲಿ ಯಾವುದೇ ಸಂಶಯವಿಲ್ಲ.

ಬೇಡಿಕೆಗಳು: ಜಾಗದಲ್ಲಿ ಯಾವುದೇ ಕೈಗಾರಿಕಾ ಘಟಕ ಸ್ಥಾಪನೆಗೆ ನಿರಾಪೇಕ್ಷಣ ಪತ್ರ (ಎನ್‌ಒಸಿ) ಸಮ್ಮತಿ ನೀಡಬಾರದು. ದಿನಾಂಕ 27-01-2026ರ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯ ನಿರ್ಣಯವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ತಹಸೀಲ್ದಾರ್, ಸಹಾಯಕ ಆಯುಕ್ತರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪರಿಸರ ಅಧಿಕಾರಿಗಳು ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರದ ಅಧಿಕಾರಿಗಳಿಗೆ ಗ್ರಾಮ ಪಂಚಾಯತ್‌ನಿಂದ ಅಧಿಕೃತ ಪತ್ರ ಬರೆದು ಜನವಸತಿ ಪ್ರದೇಶದಲ್ಲಿ ಕೈಗಾರಿಕೆ ಸ್ಥಾಪನೆಗೆ ವಿರೋಧ ವ್ಯಕ್ತಪಡಿಸಬೇಕು.

ಜನರ ಜೀವ, ಆರೋಗ್ಯ, ಕೃಷಿ ಮತ್ತು ಪರಿಸರ ರಕ್ಷಣೆಗೆ ಅಗತ್ಯವಿರುವ ಎಲ್ಲ ಕಾನೂನು ಕ್ರಮ ಕೈಗೊಳ್ಳಬೇಕು. ಜನರ ಆಶೋತ್ತರಗಳಿಗೆ ವಿರುದ್ಧವಾಗಿ ಕೈಗಾ-ರಿಕಾ ಘಟಕಕ್ಕೆ ಅವಕಾಶ ನೀಡುವ ಯಾವುದೇ ಪ್ರಯತ್ನ ನಡೆದರೆ, ಕರ್ನಾಟಕ ರೈತ ಸಂಘ ಗ್ರಾಮ ಘಟಕ 4ನೇ ಮೈಲ್ ಕ್ಯಾಂಪ್ ಹಾಗೂ ಸ್ಥಳೀಯ ಗ್ರಾಮಸ್ಥರು ಗ್ರಾಮ ಪಂಚಾಯತ್ ಕಚೇರಿ ಎದುರು ಅನಿರ್ದಿಷ್ಟಾವಧಿ ಹೋರಾಟ ನಡೆಸಲು ಬದ್ಧರಾಗಬೇಕಾಗುತ್ತದೆ ಎಂದು ಸ್ಪಷ್ಟಪಡಿಸಿದರು. ಅದರ ಸಂಪೂರ್ಣ ಹೊಣೆಗಾರಿಕೆ ಸಂಬಂಧಿಸಿದ ಅಧಿಕಾರಿಗಳ ಮೇಲೆಯೇ ಇರುತ್ತದೆ. ಜನರ ಬದುಕು ಮತ್ತು ಪರಿಸರದ ರಕ್ಷಣೆ ನಮ್ಮ ಹಕ್ಕು, ಅದಕ್ಕಾಗಿ ಹೋರಾಟ ನಮ್ಮ ಕರ್ತವ್ಯವಾಗಿದೆ ಎಂದರು.

ಈ ಸಂದರ್ಭದಲ್ಲಿ: ಪ್ರಧಾನ ಕಾರ್ಯದರ್ಶಿ ರಂಗಪ್ಪ ನಾಯಕ, ಉಪಾಧ್ಯಕ್ಷ ಎಂ.ಶಂಕರ್, ಕಾರ್ಯದರ್ಶಿ ಮುತ್ತುರಾಜ್, ಖಜಾಂಚಿ ಕನಕಪ್ಪ ಮುರಣಿ, ಕಾರ್ಯಕಾರಿ ಸಮಿತಿ ಸದಸ್ಯರಾದ, ಅಮರೇಶಪ್ಪ ಕುಂಬಾರ, ಸಣ್ಣ ಈರಪ್ಪ, ರಾಮಣ್ಣ ಬೆಂಗಳೂರು, ಮೌಲಪ್ಪ ಹಾರಾಪುರ, ಆನಂದಪ್ಪ, ಬಸವರಾಜ ಹಂಚಿನಾಳ, ನಾಗರಾಜ ಮಡಿವಾಳ, ರಾಜು, ಧರಗಯ್ಯ ಸೇರಿದಂತೆ ಅನೇಕರು ಇದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINT-ERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101